MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 213 | ಶನಿವಾರ : 07-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 213 | SATURDAY : 07-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಬೆಂಗಳೂರು ನೂತನ ಪೊಲೀಸ್ ಕಮಿಷನರ್ ಸೀಮಂತ್‌ಕುಮಾರ್ ಸಿಂಗ್ ಅಧಿಕಾರ ಸ್ವೀಕಾರ



ಬೆಂಗಳೂರು, ಜೂ.6–ನೂತನ ನಗರ ಪೊಲೀಸ್ ಕಮಿಷನರ್ ಆಗಿ ಹಿರಿಯ ಐಪಿಎಸ್ ಅಧಿಕಾರಿ ಸೀಮಂತ್‌ಕುಮಾರ್ ಸಿಂಗ್ ಅವರು ಅಧಿಕಾರ ಸ್ವೀಕರಿಸಿದ್ದಾರೆ. ವರ್ಗಾವಣೆ ಆದೇಶ ಹೊರಬರುತ್ತಿದ್ದಂತೆ ತಡರಾತ್ರಿ ಸೀಮಂತ್ ಕುಮಾರ್ ಸಿಂಗ್ ಅವರು ಕಮಿಷನರ್ ಕಚೇರಿಗೆ ಬಂದು 39ನೇ ಪೊಲೀಸ್ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

# ಸಿಎಂ–ಡಿಸಿಎಂ,ಗೃಹಮಂತ್ರಿ ರಾಜೀನಾಮೆಗೆ ಬಿಜೆಪಿ–ಜೆಡಿಎಸ್ ಆಗ್ರಹ

**ಬೆಂಗಳೂರು, ಜೂ. 6–** ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಘಟನೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ. ಪರಮೇಶ್ವರ್ ರವರೇ ಹೊಣೆಗಾರರು ಎಂದು ಆರೋಪಿಸಿರುವ ಬಿಜೆಪಿ–ಜೆಡಿಎಸ್ ಈ ಮೂವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದೆ. ಬೆಂಗಳೂರಿನಲ್ಲಿ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹಾಗೂ ವಿರೋಧ ಪಕ್ಷದ ನಾಯಕ ರುಗಳಾದ ಆರ್.ಅಶೋಕ್, ಚಲವಾದಿ ನಾರಾಯಣಸ್ವಾಮಿ ಇವರುಗಳು, ಈ ಘಟನೆಗೆ ಸರ್ಕಾರದ ನಿರ್ಲಕ್ಷ್ಯ ಮತ್ತು ಅಸಮರ್ಪಕ ಭದ್ರತಾ ವ್ಯವಸ್ಥೆಯೇ ಕಾರಣ. ಪೊಲೀಸ್ ಆಯುಕ್ತರ ಅಮಾನತು ಕೇವಲ ನಾಟಕ ಎಂದು ವಾಗ್ದಾಳಿ ನಡೆಸಿದರು.ಈ ಪ್ರಕರಣದಲ್ಲಿ



ಆರೋಪಿ ನಂಬರ್ 1 ಮುಖ್ಯಮಂತ್ರಿ ಸಿದ್ಧರಾಮಯ್ಯ, ಆರೋಪಿ ನಂ.– 2 ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆರೋಪಿ ನಂ.–3 ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹಾಗಾಗಿ ಈ ಮೂವರು ರಾಜೀನಾಮೆ ನೀಡಲೇಬೇಕು ಎಂದು ಒತ್ತಾಯಿಸಿದರು.ರಾಜ್ಯ ಸರ್ಕಾರ ಕಾಲ್ತುಳಿತ ಘಟನೆ ಬಗ್ಗೆ ಮ್ಯಾಜಿಸ್ಟ್ರೀಯಲ್ ನ್ಯಾಯಾಲಯ ತನಿಖೆ, ಸಿಐಡಿ ತನಿಖೆಗೂ ಆದೇಶಿಸಿದೆ. ಒಂದು ಘಟನೆಗೆ ಮೂರು ತನಿಖೆಗಳು ಎಂದು ವ್ಯಂಗ್ಯವಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ನಿವೃತ್ತ ನ್ಯಾಯಮೂರ್ತಿ ಬದಲು ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಯವರಿಂದ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪೊಲೀಸರನ್ನು ಹರಕೆಯ ಕುರಿ ಮಡಾಲು ಹೊರಟ್ಟಿದ್ದಾರೆ. ಮೊಸರು ತಿಂದಿದ್ದು ನೀವು, ಕೆಸರು ಹಚ್ಚಿದ್ದು ಪೊಲೀಸರಿಗೆ ಎಂದು ಆರ್. ಅಶೋಕ್ ಹರಿಹಾಯ್ದರು.ಆರ್‌ಸಿಬಿಯವರು ಬಲವಂತಾಗಿ ಕಾರ್ಯಕ್ರಮ ಮಾಡಿದರು ಎಂದು ಎಫ್‌ಐಆರ್‌ನಲ್ಲಿ ಹೇಳಿದ್ದಾರೆ. ಆದರೆ ಏಕೆ ನಿಷೇಧಾಜ್ಞೆ ಜಾರಿ ಮಾಡಲಿಲ್ಲ. ಈ ಪ್ರಕರಣದಲ್ಲಿ ಸರ್ಕಾವೇ ಅಪರಾಧಿ. ಯಾರು ಏನೇ ಹೇಳಿದರೂ ಕಾರ್ಯಕ್ರಮ ಮಾಡಬೇಕು ಎಂದಿದ್ದು ಸರ್ಕಾರ. 2ನೇ ಪುಟಕ್ಕೆ

# ರಸ್ತೆ ಅಪಘಾತ :ಮೂವರ ದಾರಣು ಸಾವು



**ತುಮಕೂರು, ಜೂ.6–** ಮುಂದೆ ಚಲಿಸುತ್ತಿದ್ದ ಕಂಟೇನರ್ ವಾಹನಕ್ಕೆ ಹಿಂದಿನಿಂದ ದ್ವಿಚಕ್ರ ವಾಹನ ಅಪ್ಪಳಿಸಿದ ಪರಿಣಾಮ ಮೂರು ಮಂದಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಇಲ್ಲಿನ ಕ್ಯಾತ್ಸಂದ್ರ ಪೊಲೀಸ್ ಠಾಣೆ ಸರಹದ್ದಿನ ನಂದಿಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಬೆಳಿಗ್ಗೆ ನಡೆದಿದೆ.

ಮೃತಪಟ್ಟವರನ್ನು ಗುಬ್ಬಿ ತಾಲ್ಲೂಕು ಸಿ.ಎಸ್.ಪುರ ಹೋಬಳಿ ಅಂಕಲಕೊಪ್ಪದ ನಿವಾಸಿ ಧನುಷ್‌ಗೌಡ (22), ನಿಟ್ಟೂರು ಹೋಬಳಿ ಬಸವಾಪಟ್ಟಣದ ನಿವಾಸಿ ರಾಕೇಶ್ (24) ಹಾಗೂ ಚಳ್ಳಕೆರೆಯ ಸಮೀಪದ ಚಿಕ್ಕಚೆಲ್ಲೂರು ಗ್ರಾಮದ ಧನರಾಜ್ (24) ಎಂದು ಗುರುತಿಸಲಾಗಿದೆ.

ಈ ಮೂವರು ನಗರದ ಉಪ್ಪಾರಹಳ್ಳಿಯಲ್ಲಿ ಬಾಡಿಗೆ ಮನೆ ಮಾಡಿಕೊಂಡು ವಾಸವಿದ್ದು, ದಾಬಸ್‌ಪೇಟೆಯಲ್ಲಿರುವ ಎಂ.ಇ. ಸೋಲಾರ್ ಪ್ಲಾಂಟ್‌ನಲ್ಲಿ ಸೆಕ್ಯೂರಿಟಿಗಳಾಗಿ ಕಾರ್ಯನಿರ್ವಹಿಸುತ್ತಿದ್ದರು. ಈ ಕಾರ್ಖಾನೆಯಲ್ಲಿ ರಾತ್ರಿ ಪಾಳಿ ಕೆಲಸ ಮುಗಿಸಿಕೊಂಡು ಬೆಳಿಗ್ಗೆ ತುಮಕೂರಿನಲ್ಲಿರುವ ಬಾಡಿಗೆ ಮನೆಗೆ ಒಂದೇ ದ್ವಿಚಕ್ರ ವಾಹನದಲ್ಲಿ ಬರುತ್ತಿದ್ದರು ಎನ್ನಲಾಗಿದೆ.

ಮಾರ್ಗಮಧ್ಯೆ ನಂದಿಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮುಂದೆ ಚಲಿಸುತ್ತಿದ್ದ ಕಂಟೇನರ್ 2ನೇ ಪುಟಕ್ಕೆ

# ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟಕ್ಕೆ ಕಾನೂನು ಸಲಹೆಗಾರರಾಗಿ ಲಕ್ಷ್ಮೀದೇವಿ ನಾಯಕ್ ಆಯ್ಕೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.6–**ಮಾನ್ವಿ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಶುಕ್ರವಾರ ಬಿ.ವಿ.ಆರ್. ಪ್ರೌಢಶಾಲೆಯಲ್ಲಿ ನಡೆದ ಸಭೆಯಲ್ಲಿ ಒಕ್ಕೂಟಕ್ಕೆ ಕಾನೂನು ಸಲಹೆಗಾರರನ್ನಾಗಿ ಲಕ್ಷ್ಮೀದೇವಿ ನಾಯಕ್ ಅವರನ್ನು ಎಲ್ಲಾ ಪದಾಧಿಕಾರಿಗಳು ಒಮ್ಮತದಿಂದ ಅವಿರೋಧವಾಗಿ ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷರಾದ ಶರ್ಫುದ್ದೀನ್ ಪೋತ್ನಾಳ್ ಅವರು ಮಾತನಾಡಿ, "ಲಕ್ಷ್ಮೀದೇವಿ ನಾಯಕ್ ಅವರು ಕೇವಲ ಒಬ್ಬ ವಕೀಲರಲ್ಲದೆ, ಒಂದು ದೊಡ್ಡ ಮನೆತನದಿಂದ ಬಂದ ಧೀಮಂತ ಮತ್ತು ದಿಟ್ಟ ಮಹಿಳೆ. ಕಾನೂನಿನ ಜೊತೆಗೆ ಸಾಮಾಜಿಕ ಮತ್ತು ರಾಜಕೀಯ ಅನುಭವ ಹೊಂದಿರುವ ಲಕ್ಷ್ಮೀದೇವಿ ಅವರು ನಮ್ಮ ಒಕ್ಕೂಟಕ್ಕೆ ಕಾನೂನು ಸಲಹೆಗಾರರಾಗಿ ನೇಮಕಗೊಂಡಿರುವುದು ತುಂಬಾ ಸಂತಸದ ವಿಷಯ," ಎಂದು ಅವರನ್ನು ಸನ್ಮಾನಿಸಿ ಒಕ್ಕೂಟಕ್ಕೆ ಸ್ವಾಗತಿಸಿಕೊಂಡರು.

ಈ ಸಂದರ್ಭದಲ್ಲಿ ಒಕ್ಕೂಟದ ಪದಾಧಿಕಾರಿಗಳಾದ ಶೇಕ್ ಫರೀದ್ ಉಮ್ರಿ, ಎಂ.ಎ.ಎಚ್. ಮುಕೀಮ್, ರಾಜಾಸುಭಾಷ್ ಚಂದ್ರ ನಾಯಕ್, ಕೆ.ಇ. ನರಸಿಂಹ, ಬಿ.ವಿ. ರೆಡ್ಡಿ, ಶ್ರೀನಿವಾಸ್ ,ಮನೋಜ್ ಮಿಶ್ರಾ, ಅನಿಲ್ ಕುಮಾರ್.ಹೆಚ್, ಭೀಮರಾಯ ಸಿತಿಮನಿ, ಅಖಿಲೇಶ್ ಕುರುಡಿ, ಸೈಯದ್ ಅಹಮದ್ ಹುಸೇನಿ ಮತವಾಲೆ, ಪ್ರಭು ಟಕ್ಕಳಕಿ, ಮಹಾಂತೇಶ್ ಓಲೆಕಾರ, ಆಲೀಮ್ ಖಾನ್, ಶಂಕ್ರಪ್ಪ ಅಂಗಡಿ, ಹುಸೇನ್ ಬಾಷಾ, ಕೆ. ವಿಜಯಲಕ್ಷ್ಮಿ, ಸರಿತಾ ಜೈನ್, ಮೊಹಮ್ಮದ್ ಹಾರೂನ್, ಹುಸೇನ್ ಬಾಷಾ, ಅಂಜನ ರೆಡ್ಡಿ, ಚಂದ್ರಶೇಖರ ಹಾಗೂ ರಾಜು ತಾಳಿಕೋಟೆ ಉಪಸ್ಥಿತರಿದ್ದರು.

# ನಾಳೆ ಮೃಗಶಿರ ಮಾತ್ರೆ ವಿತರಣೆ, ಜನ ಕಲ್ಯಾಣ ರತ್ನ ಪ್ರಶಸ್ತಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.6–**ರಾಜ್ಯ ಮಟ್ಟದ ಮೃಗಶಿರ ಮಾತ್ರೆ ವಿತರಣೆ ಹಾಗೂ ಜನ ಕಲ್ಯಾಣ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ನಾಳೆ (ಜೂನ್ 8) ಸ್ಥಳೀಯ ಗುರು ಭವನದಲ್ಲಿ ಜರುಗಲಿದೆ ಎಂದು ಹೂ ಅಲ್ ಶಿಫಾಹ್ ವನೌಷಧಿಕ ಜನಕಲ್ಯಾಣ ಟ್ರಸ್ಟ್ ಅಧ್ಯಕ್ಷ ಡಾ.ಜಲಾಲುದ್ದೀನ್ ಅಕ್ಬರ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಪ್ರತಿ ವರ್ಷದಂತೆ ಈ




ಬಾರಿಯೂ ಮೃಗಶಿರ ಕೂಡುವ ವೇಳೆ ಸಾರ್ವಜನಿಕರಿಗೆ ಗುರು ಭವನದಲ್ಲಿ ಜೂನ್ 8 ಬೆಳಗ್ಗೆ 10.30ಕ್ಕೆ ಉಚಿತವಾಗಿ ಮಾತ್ರೆ ವಿತರಿಸಲಾಗುವುದು. ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರಿಗೆ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಗುವುದು. ವಿವಿಧ ಮಠಾಧೀಶರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಪುರಸಭೆ ಅಧ್ಯಕ್ಷರು ಸೇರಿ ಹಲವು ಮುಖಂಡರು ಸಮಾರಂಭದಲ್ಲಿ ಪಾಲ್ಗೊಳ್ಳುವರು. ಹೆಚ್ಚಿನ ಸಂಖ್ಯೆಯಲ್ಲಿ ಅಭಿಮಾನಿಗಳು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಕೋರಿದರು.

ಮುಖಂಡರಾದ ಮಾರುತಿ ಗೋಸ್ಲೇ ಜಿಮ್ ಕರಡಕಲ್, ರಮೇಶ್ ಕನ್ನಾಪೂರಹಟ್ಟಿ, ಬಸವರಾಜಸ್ವಾಮಿ, ಶಿರೊಡಲಬಂಡಾ, ರಾಜು ಬಂಡಿ ಸೇರಿ ಇತರರು ಇದ್ದರು.

# ಹಠಾತ್ ದಾಳಿ: ಇಟ್ಟಿಗೆ ಭಟ್ಟಿ ಮಾಲೀಕರ ವಿರುದ್ಧ ಪ್ರಕರಣ ದಾಖಲು

**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.6–**ದೇವದುರ್ಗ ತಾಲೂಕಿನಲ್ಲಿ ಇತ್ತೀಚೆಗೆ ನಿರಂತರ ಕಾರ್ಯಾಚರಣೆ ನಡೆಸಿ, ದುಡಿಯಲು ಹೋಗುತ್ತಿದ್ದ ಮಕ್ಕಳನ್ನು ರಕ್ಷಿಸಿ ಶಾಲೆಗೆ ಸೇರಿಸಿ ಯಶಸ್ವಿ ಕಾರ್ಯಚರಣೆ ಮಾಡಿ ಜನರಿಂದ ಮೆಚ್ಚುಗೆ ಗಳಿಸಿದ್ದ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋ ಜನಾ ನಿರ್ದೇಶಕರ ತಂಡವು ಇದೀಗ ಮತ್ತೊಂದು ಕಾ ರ್ಯಾಚರಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಣೆ ಮಾಡಿದೆ.

ಮಕ್ಕಳ ಸಹಾಯವಾಣಿಗೆ ಬಂದ ದೂರಿನನ್ವಯ ಟಾಸ್ಕ್ ಪೋರ್ಸ್ ಸಮಿತಿ ತಂಡವು ರಾಯಚೂರು ತಾಲೂಕಿನ ಲಿಂಗನಖಾನದೊಡ್ಡಿಯ ಎಸ್.ಆರ್.ಬಿ ಇಟ್ಟಿಗೆ ಭಟ್ಟಿ ಮೇಲೆ ಹಠಾತ್ ದಾಳಿ ನಡೆಸಿ ಇಟ್ಟಿಗೆ



ಭಟ್ಟಿಯಲ್ಲಿ ಕೆಲಸ ಮಾಡುತ್ತಿದ್ದ ಬಾಲಕಾರ್ಮಿಕ ಮತ್ತು ಒಬ್ಬ ಕಿಶೋರ ಕಾರ್ಮಿಕರನ್ನು ರಕ್ಷಣೆ ಮಾಡಿದೆ. ಈ ಬಾಲ ಕಾರ್ಮಿಕರನ್ನು ಸರ್ಕಾರಿ ಬಾಲಕಿಯರ ಬಾಲಮಂದಿರ ರಾಯಚೂರ ಅವರಿಗೆ ಒಪ್ಪಿಸಲಾಗಿದೆ. ಮಕ್ಕಳನ್ನು ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದ ಮೆ.ಎಸ್.ಆರ್.ಬಿ ಇಟ್ಟಿಗೆ ಭಟ್ಟಿಯ ಮಾಲೀಕರ ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ ಇಡಪನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, 1ನೇ ವೃತ್ತ ರಾಯಚೂರನ ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್ ಘನಿ, ಇಡಪನೂರ ಪೊಲೀಸ್ ಇಲಾಖೆಯ ಶಂಕರಗೌಡ, ರಾಯಚೂರ ಮಕ್ಕಳ ಸಹಾಯವಾಣಿ ಘಟಕದ ತಾಯರಾಜ್ ಹಾಗೂ ಲಿಂಗನಖಾನದೊಡ್ಡಿ ಗ್ರಾಮ ಪಂಚಾಯಿತಿಯ

# ಕೃಷಿ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ..6–** "ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮತ್ತು ಹಸಿರು ನಾಳೆಯ ಕಡೆಗೆ" ಎಂಬ ಶೀರ್ಷಿಕೆಯಡಿ ನಗರದಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಅರಣ್ಯ ಇಲಾಖೆ ಪ್ರಾದೇಶಿಕ ವಿಭಾಗ ಇವರ ಸಹಯೋಗದೊಂದಿಗೆ ಜೂನ್ 5ರಂದು ವಿಶ್ವ ವಿದ್ಯಾಲಯದ ಆವರಣದಲ್ಲಿ ಸುಸ್ಥಿರ ಜೀವನವನ್ನು ಪ್ರೇರೇಪಿಸಲು ದೊಡ್ಡ ಪ್ರಮಾಣದ ಸಸಿಗಳನ್ನು ನೆಡುವ ಅಭಿಯಾನ, ವಿಶ್ವ ಪರಿಸರ ದಿನಾಚರಣೆ ಮತ್ತು ಹಸಿರು ಪದವಿ ಕಾರ್ಯಕ್ರಮವು ಅರ್ಥಪೂರ್ಣವಾಗಿ ನಡೆಯಿತು.

ಕೃಷಿ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಡಾ.ಶಹಬಾಜ್ ನೂರಿ ಅವರು ಸ್ಥಾಪಿಸಿದ "ಪ್ಯಾರೆಸ್ಟ್ ವುಡ್ ಮ್ಯೂಸಿಯಂನ್ನು ಇದೆ ವೇಳೆ ಗೌರವಾನ್ವಿತ ಕುಲಪತಿಗಳು ಉದ್ಘಾಟಿಸಿದರು. ಇದೆ ವೇಳೆ ವಾಣಿಜ್ಯಕ್ಕೆ ಸಂಬಂಧಿಸಿದಂತೆ ಪ್ರಮುಖವಾದ 36 ಮರದ ಮಾದರಿಗಳು, 42 ಅರಣ್ಯ ಬೀಜ ಮಾದರಿಗಳು, ಪರಿಸರ ಸ್ನೇಹಿ ವಿವಿಧ ಮರ ಆಧಾರಿತ ಉತ್ಪನಗಳ ಪ್ರದರ್ಶನ ನಡೆಯಿತು.

ಗೌರವಾನ್ವಿತ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಮಾತನಾಡಿ, ಏಕ ಬಳಕೆಯ ಪ್ಲಾಸ್ಟಿಕಗಳನ್ನು ತೆಗೆದು ಹಾಕುವ ತುರ್ತು ಅಗತ್ಯವಿದೆ. ಜೀವ ವೈವಿಧ್ಯತೆ, ಪರಿಸರ





ಉಸ್ತುವಾರಿ ಮತ್ತು ಹವಾಮಾನ ಸ್ಥಿತಿ ಸ್ಥಾಪಕತ್ವಕ್ಕೆ ವಿಶ್ವವಿದ್ಯಾಯದ ಬದ್ದತೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಸಸಿಗಳನ್ನು ನೆಡುವ ಮೂಲಕ ಪ್ರತಿಯೊಬ್ಬ ವಿದ್ಯಾರ್ಥಿಯು ಪದವಿ ಪಡೆಯುವರೆಗೂ ಒಂದು ಸಸಿಯನ್ನು ದತ್ತು 2ನೇ ಪುಟಕ್ಕೆ

# ಪೋಷಕತ್ವ ಯೋಜನೆಯ ಅರಿವು ಮತ್ತು ಜಾಗೃತಿ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜೂ.6–**ಮಕ್ಕಳ ಪಾಲನೆ, ಪೋಷಣೆ ಮತ್ತು ರಕ್ಷಣೆಯ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸಂಚಾರ ಪೊಲೀಸ್ ಠಾಣೆ ದೇವ ದುರ್ಗದಲ್ಲಿ ಒಂದು ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆ ಮತ್ತು ಪೋಷಕತ್ವ ಯೋಜನೆಯಡಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಪ್ರಮುಖ ಮಾಹಿತಿಗಳನ್ನು ಹಂಚಿಕೊಂಡರು.



ಕಾರ್ಯಕ್ರಮದಲ್ಲಿ ಮಾತನಾ ಡಿದ ಆರಕ್ಷಕ ಉಪನಿರೀಕ್ಷಕ ನಾರಾಯಣ್ ಆರ್.ಜಿ. ಅವರು, "ಮಕ್ಕಳ ಪಾಲನೆ ಮತ್ತು ರಕ್ಷಣೆ ನಮ್ಮ ಮತ್ತು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸರ್ಕಾರದ ಪ್ರತಿಯೊಂದು ಯೋಜನೆಯು ಮಗುವಿಗೆ ತಲುಪಬೇಕು ಮತ್ತು ಮಕ್ಕಳ ರಕ್ಷಣೆಗೆ ನಮ್ಮ ಇಲಾಖೆ ಯಾವಾಗಲೂ ಬದ್ಧವಾಗಿರುತ್ತದೆ" ಎಂದು ತಿಳಿಸಿದರು.

ಪೋಷಕತ್ವ ಯೋಜನೆಯ ಸಂಯೋಜಕರು ನಾಗರಾಜ್ ಮಾನಸಗಲ್ ಅವರು ಪೋಷಕತ್ವದ ಕುರಿತು ವಿವರಣೆ ನೀಡಿದರು. "ಪೋಷಕತ್ವ ಎಂದರೆ ಕಾನೂನಿನ ಪ್ರಕಾರ ಪಾಲನೆ, ಪೋಷಣೆ, ರಕ್ಷಣೆಯಿಂದ ವಂಚಿತರಾದ ಮಕ್ಕಳು ಹಾಗೂ ಪರಿವಾರದ ಹಾರೈಕೆಯಿಂದ ವಂಚಿತರಾದ ಮಕ್ಕಳಿಗೆ ತಾತ್ಕಾಲಿಕ ಪರಿವಾರದ ಮೂಲಕ ಸಿಗುವ ಕಾಳಜಿಯೇ ಪೋಷಕತ್ವ" ಎಂದು ವಿವರಿಸಿದರು.

ಅಲ್ಲದೆ, "ಬಾಲ ನ್ಯಾಯ ಕಾಯ್ದೆ 2015, ಕಲಂ 44 ರ ಪ್ರಕಾರ ಪೋಷಕತ್ವ ಯೋಜನೆಯಡಿ ಮಗುವಿನ ಪಾಲನೆ, ಪೋಷಣೆ ಮತ್ತು ರಕ್ಷಣೆಗಾಗಿ 2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ಸಿಎಂ-ಡಿಸಿಎಂ,ಗೃಹಮಂತ್ರಿ ರಾಜೀನಾಮೆಗೆ ಬಿಜೆಪಿ-ಜೆಡಿಎಸ್ ಆಗ್ರಹ

ಇಲ್ಲಿ ಸರ್ಕಾರವೇ ಅಪರಾಧಿ ಸ್ಥಾನದಲ್ಲಿದೆ. ಹಾಗಾಗಿ ಹಾಲಿ ನ್ಯಾಯಮೂರ್ತಿಗಳಿಂದ ತನಿಖೆಯಾಗಲಿ, ನ್ಯಾಯ ಸಿಗುವವರೆಗೂ ನಮ್ಮ ಹೋರಾಟ ನಿಲ್ಲಲ್ಲ ಎಂದು ಅಶೋಕ್ ಹೇಳಿದರು.

ಇದೇ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು, ರಾಜ್ಯ ಸರ್ಕಾರ ವಿಧಾನಸೌಧದ ಮುಂದೆ ಸಮಾರಂಭ ಮಾಡುವ ಅಗತ್ಯ ಏನಿತ್ತು. ತರಾತುರಿಯಲ್ಲಿ ಸಮಾರಂಭ ಮಾಡಿದ್ದು ಏಕೆ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಜನ ಕಾಲ್ತುಳಿತದಿಂದ ಸತ್ತಿದ್ದರೆ, ಉಪಮುಖ್ಯಮಂತ್ರಿಗಳು ಕ್ರಿಡಾಂಗಣದಲ್ಲಿ ಕಪ್ಪಿಗೆ ಮುತ್ತಿಟ್ಟು ಸಂಭ್ರಮ ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದರು.

ಪೊಲೀಸ್ ಅಧಿಕಾರಿಗಳನ್ನು ಹರಕೆಯ ಕುರಿ ಮಾಡುವ ಬದಲು ತಾವೇ ಜವಾಬ್ದಾರಿ, ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.ಸಂಭ್ರಮಾಚಾರಣೆಗೆ ಅನುಮತಿ ಕೊಟ್ಟಿದ್ದು ಯಾರು. ಪರವಾನಗಿ ಇಲ್ಲದ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಏಕೆ ಹೋದರು. ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ. ಪರಮೇಶ್ವರ್ ರಾಜೀನಾಮೆ ನೀಡಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಇದೇ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಸರ್ಕಾರದ ಉದ್ಧಟತನಕ್ಕೆ 11 ಜೀವಗಳು ಬಲಿಯಾಗಿವೆ. ಸರ್ಕಾರ ಮಾಡಿರುವ ತಪ್ಪನ್ನು ಮುಚ್ಚಿಕೊಳ್ಳುವುದು ಪೊಲೀಸರ ಅಮಾನತು ಮಾಡಿದ್ದಾರೆ. ಇದು ರಾಜ್ಯಕ್ಕೆ ಕೆಟ್ಟ ಹೆಸರು ಎಂದು ಹೇಳಿದರು.ಹೊಸ ವರ್ಷ ಆಚರಣೆ ಸಂದರ್ಭದಲ್ಲಿ ಇದೇ ಪೊಲೀಸ್ ಆಯುಕ್ತರು ಉತ್ತಮವಾಗಿ ಕೆಲಸ ಮಾಡಿದ್ದಾರೆ. ಈಗ ಅವರನ್ನು ಅಮಾನತು ಮಾಡುತ್ತಿರೀ ಹೇಗೆ. ಅಮಾನತು ಮಾಡಿರುವ ಸೆಂಟ್ರಲ್ ಡಿಸಿಪಿ ಯತೀಂದ್ರ ಸಿದ್ಧರಾಮಯ್ಯ ಅವರ ಆಪ್ತರು. 15 ದಿನ ಮುಗಿಯುವವರೆಗೂ ಈ ಸಸ್ಪೆಂಡ್ ನಾಟಕ ನಂತರ ಉನ್ನತ ಮಟ್ಟದ ಪ್ರಮೋಷನ್ ಕೊಡುತ್ತೀರಿ ಎಂದು ಕಿಡಿಕಾರಿದರು.

ಪೊಲೀಸ್ ಆಯುಕ್ತರು ವಿಧಾನಸೌಧದ ಮುಂದೆ ಸ್ಟೇಡಿಯಂ ಎರಡೂ ಕಡೆ ಭದ್ರತಾ ಕಾರಣಕ್ಕೆ ಸಮಾರಂಭ ಬೇಡ ಎನ್ನುತ್ತಾರೆ. ಆದರೆ ಮುಖ್ಯಮಂತ್ರಿಗಳ ಜತೆ 24 ಗಂಟೆ ಗೋವಿಂದ ಗೋವಿಂದ ಎಂದು ಹೇಳುವ ವ್ಯಕ್ತಿ ಪೊಲೀಸ್ ಕಮಿಷನರ್‌ಗೆ ದೂರವಾಣಿ ಮಾಡಿ ಒತ್ತಡ ಹಾಕುತ್ತಾರೆ ಎಂದು ಕುಮಾರಸ್ವಾಮಿ ದೂರಿದರು.ಕಾಲ್ತುಳಿತದಿಂದ ಜನ ಸತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊಮ್ಮಗನನ್ನು ಕರೆದುಕೊಂಡು ಜನಾರ್ಧನ ಹೋಟೆಲ್‌ಗೆ ಹೋಗಿ ಮಸಾಲೆ ದೋಸೆ ತಿನ್ನುತ್ತಾರೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಟೇಡಿಯಂಗೆ ಹೋಗಿ ಕಪ್‌ಗೆ ಮುತ್ತು ಕೊಡುತ್ತಾರೆ ಎಂದು ಕಿಡಿಕಾರಿ, ಅಧಿಕಾರಿಗಳು ಹೇಳಿದರೂ ಅದನ್ನು ಒಪ್ಪದೆ ಚೆಲ್ಲಾಟವಾಡಿದವರು ಸರ್ಕಾರದವರು. ಇವರಿಗೇನು ಮಾನ ಮರ್ಯಾದೆ ಇದೆಯ ಎಂದು ಕುಮಾರಸ್ವಾಮಿ ಹರಿಹಾಯ್ದರು.ಈ ಘಟನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ. ಪರಮೇಶ್ವರ್ ರವರನ್ನು ಕಾಂಗ್ರೆಸ್‌ನಿಂದ ಹೊರ ಹಾಕಬೇಕು ಎಂದು ಕುಮಾರಸ್ವಾಮಿ ಕಾಂಗ್ರೆಸ್ ಹೈಕಮಾಂಡ್‌ನ್ನು ಆಗ್ರಹಿಸಿದರು.

# ರಸ್ತೆ ಅಪಘಾತ :ಮೂವರ ದಾರಣು ಸಾವು

ವಾಹನಕ್ಕೆ ಬೈಕ್ ಅಪ್ಪಳಿಸಿದ್ದರಿಂದ ಈ ಮೂವರು ಸ್ಥಳದಲ್ಲೇ ಅಸುನೀಗಿದ್ದಾರೆ.ಘಟನೆಯ ಸುದ್ದಿ ತಿಳಿದ ಕೂಡಲೇ ಕ್ಯಾತ್ಸಂದ್ರ ಪೊಲೀಸರು ಸ್ಥಳಕ್ಕೆ ಧಾವಿಸಿ ಶವಗಳನ್ನು ತುಮಕೂರು ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ಸಾಗಿಸುವಲ್ಲಿ ಶ್ರಮಿಸಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಡಿಷನಲ್ ಎಸ್ಪಿಗಳಾದ ಗೋಪಾಲ್, ಪುರುಷೋತ್ತಮ್, ಡಿವೈಎಸ್ಪಿ ಚಂದ್ರಶೇಖರ್, ಕ್ಯಾತ್ಸಂದ್ರ ಸಿಪಿಐ ರಾಮ್‌ಪ್ರಸಾದ್, ಪಿಎಸ್‌ಐ ಚೇತನ್‌ಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ಕ್ಯಾತ್ಸಂದ್ರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಪೋಷಕತ್ವ ಯೋಜನೆಯ ಅರಿವು ಮತ್ತು ಜಾಗೃತಿ ಕಾರ್ಯಕ್ರಮ

ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ, ಜೈವಿಕ ಕುಟುಂಬವಲ್ಲದ ಬೇರೊಂದು ಕುಟುಂಬಕ್ಕೆ ತಾತ್ಕಾಲಿಕ ಅಥವಾ ವಿಸ್ತರಿಸಲ್ಪಟ್ಟ ಅವಧಿಯವರೆಗೆ (ಎರಡು ವರ್ಷಕ್ಕೆ ಮೀರದಂತೆ) ಮಗುವನ್ನು ಕಲ್ಪಿಸಿಕೊಡುವ ಉದ್ದೇಶವನ್ನು ಈ ಯೋಜನೆ ಹೊಂದಿದೆ" ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಮೋಹನ್ ಪಿ.ಸಿ. ಸ್ವಾಗತಿಸಿದರು. ಹನುಮಂತಪ್ಪ ಎ.ಎಸ್.ಐ. ಹಾಗೂ ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು. ಈ ಅರಿವು ಮೂಡಿಸುವ ಕಾರ್ಯಕ್ರಮವು ಮಕ್ಕಳ ಹಕ್ಕುಗಳು ಮತ್ತು ಅವರ ಸುರಕ್ಷತೆಯ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಲು ಸಹಕಾರಿಯಾಯಿತು.

# ಹಠಾತ್ ದಾಳಿ: ಇಟ್ಟಿಗೆ ಭಟ್ಟಿ ಮಾಲೀಕರ ವಿರುದ್ಧ ಪ್ರಕರಣ ದಾಖಲು

ಬಿಲ್ ಕಲೆಕ್ಟರ್ ತಾಯಪ್ಪ ಅವರು ದಾಳಿಯಲ್ಲಿ ಭಾಗಿಯಾಗಿ ಉತ್ತಮ ಕಾರ್ಯ ಮಾಡಿದ್ದಾರೆ.

ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ: ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 2016 ರಂತೆ 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಒಂದು ವೇಳೆ ದುಡಿಸಿಕೊಂಡಲ್ಲಿ 50,000 ರೂ. ದಂಡ ಹಾಗೂ 2 ವರ್ಷ ಜೈಲು ಶಿಕ್ಷೆ ಇರುತ್ತದೆ. ವಾಹನಗಳಲ್ಲಿ ಮಕ್ಕಳನ್ನು ಕೃಷಿ ಚಟುವಟಿಕೆಗಳಿಗಾಗಿ ಅಕ್ರಮ ಮತ್ತು ಕಾನೂನು ಬಾಹಿರವಾಗಿ ಸಾಗಣೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ದುಡಿಯುವ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ-1098 ಗೆ ಮಾಹಿತಿ ನೀಡಬಹುದಾಗಿದೆ ಎಂದು ಇದೆ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಕೃಷಿ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

ತೆಗೆದುಕೊಂಡು ಅದನ್ನು ಪಾಲನೆ ಪೋಷಣೆ ಸಂರಕ್ಷಣೆಯನ್ನು ನೋಡಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಲು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ಕುಲಸಚಿವರಾಧ ಡಾ.ದುರ್ಗೇಶ್, ಡೀನ್ ಡಾ.ನಾರಾಯಣರಾವ್ ಕೆ., ಕೃಷಿ ಎಂಜಿನಿಯರಿಂಗ್ ಡೀನ್ ಡಾ.ಎಂ.ಎಸ್. ಅಯ್ಯನಗೌಡರು, ಪರಿಸರ ವಿಜ್ಞಾನ ಮತ್ತು ಅರಣ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಬಸವರಾಜ ಹಾಗೂ ವಿಶ್ವವಿದ್ಯಾಲಯದ ಹಲವಾರು ಪ್ರಮುಖ ಅಧಿಕಾರಿಗಳು, ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕ-ಶಿಕ್ಷೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111, 9743496111

# ಜಿಲ್ಲೆಯ ಅಭಿವೃದ್ಧಿಗೆ ಬೋಸರಾಜು ಕೊಡುಗೆ ಅಪಾರ - ವೈ.ಭೂಪನಗೌಡ

ಯುವ ಮಾರ್ಗ ಸುದ್ದಿ

**ಸಿರವಾರ,ಜೂ.6-** ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಸಚಿವರಾದ ಎನ್.ಎಸ್. ಬೋಸರಾಜು ಕೊಡುಗೆ ಅಪಾರವಾಗಿದೆ ಎಂದು ಪಟ್ಟಣ ಪಂಚಾಯತಿ ಅದ್ಯಕ್ಷ ವೈ.ಭೂಪನಗೌಡ ಹೇಳಿದರು.

ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್ ಬೋಸರಾಜು ಅವರ 79ನೇ ಹುಟ್ಟು ಹಬ್ಬದ ನಿಮಿತ್ಯ ಸಿರವಾರ ಸರ್ಕಾರಿ ಆಸ್ಪತ್ರೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಂದ ಹಣ್ಣು ಹಂಪಲು ಬ್ರೆಡ್‌ಗಳನ್ನು ರೋಗಿಗಳಿಗೆ ವಿತರಿಸಲಾಯಿ ತು, ನಂತರ ಮಾತನಾಡಿದ ಅವರು ರಾಜ್ಯ ರಾಜಕಾರಣದಲ್ಲಿ ಬೋಸರಾಜು ಸಾಹೇ ಬರು ಒಂದೇ ಒಂದು ಕಪ್ಪು ಚುಕ್ಕೆ ಇಲ್ಲದೆ ಇರುವ ರಾಜಕಾರಣಿಯಾಗಿದ್ದಾರೆ ಎಲ್ಲಾ ಜಾತಿ ಜನಾಂದ



ವರಿಗೆ ರಾಜಕೀಯ ಸ್ಥಾನಮಾನ ನೀಡಿದ್ದಾರೆ. ಅಭಿವೃದ್ಧಿ ವಿಷಯದಲ್ಲಿ ಯಾವಾಗೂ ಮುಂದೆ ಇರುತ್ತಾರೆ ಎಂದರು.

ಕಾಂಗ್ರೇಸ್ ಮಹಿಳಾ ಘಟಕದ ತಾಲೂಕ ಅದ್ಯಕ್ಷೆ ರೇಣುಕಾ ಮಾತನಾಡಿ ಜಿಲ್ಲೆಯ ರಾಜಕಾರಣದಲ್ಲಿ ತಮ್ಮದೇ ಆದ ಚಾಪು ಮೂಡಿಸಿರುವ ಎನ್.ಎಸ್.ಬೋಸರಾಜು ಅವರು ಅಭಿವೃದ್ಧಿಗೆ ಸದಾ ಮಿಡಿಯುವವರಾಗಿದ್ದಾರೆ. ಪ್ರತಿಯೊಬ್ಬ ಕಾರ್ಯಕರ್ತರನು ಗುರುತಿಸಿ ಸೂಕ್ತ ಸಮಯದಲ್ಲಿ ಸ್ಥಾನಮಾನ ನೀಡಿದ್ದಾರೆ ಎಂದರು.

ಯುವ ಮುಖಂಡರಾದ ಅರಿಕೇರಿ ಶಿವಶರಣ ಸಾಹುಕಾರ್, ವೀರೇಶ್ ಗಣೆಕಲ್, ಪ.ಪಂಚಾಯತಿ ಸದಸ್ಯ ಸೂರಿ ದುರುಗಣ್ಣ ನಾಯಕ,ಹಸನೇ ಅಲಿ ಸಾಬ, ಮೌಲಸಾಬ ವರ್ಚಸ್, ವಿರೇಶ ಗಡ್ಲ,ರಂಗನಾಥ ನಾಯಕ, ಮಲ್ಲಿಕಾರ್ಜುನ ಹೂಗಾರ, ಬಸವರಾಜ ಸಾಹುಕಾರ, ಯುವ ಕಾಂಗ್ರಸ್ ಅಧ್ಯಕ್ಷರಾದ ಮಹ್ಮದರಫಿ ಬಡೆಗರ್, ಖಾಜಾಪಾಶ,ಭೀಮೇಶ್,ನಾಗರಜ್ ,ನಾಸಿರ್,ಅಪ್ಸರ್ ಉಮ್ಮರ್ ಇನ್ನು ಹಲವಾರು ಕಾಂಗ್ರೆಸ್ ಕಾರ್ಯಕರ್ತರ ಉಪಸ್ಥಿತರಿದ್ದರು.

# ನೈಋತ್ಯ ರೈಲ್ವೆ ಮುಖ್ಯ ಆಡಳಿತಾಧಿಕಾರಿ ಭೇಟಿ

ಯುವ ಮಾರ್ಗ ಸುದ್ದಿ

**ಬೆಂಗಳೂರು,ಜೂ.6**-ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ.ಕುಮಾರ ನಾಯಕ್ ಅವರು ಇಂದು ಬೆಂಗಳೂರಿನಲ್ಲಿರುವ ನೈಋತ್ಯ ರೈಲ್ವೆಯ ಪ್ರಧಾನ ಕಚೇರಿಯಲ್ಲಿ ಮುಖ್ಯ ಆಡಳಿತಾಧಿಕಾರಿ ಅಜಯ್ ಶರ್ಮಾ ಅವರನ್ನು ಸೌಹಾರ್ದಯುತವಾಗಿ ಭೇಟಿಯಾಗಿ ಸಭೆ ನಡೆಸಿದರು.

ಸಭೆಯಲ್ಲಿ, ಸಂಸದ ಕುಮಾರ ನಾಯಕ್ ಅವರು ಮುಖ್ಯವಾಗಿ 162 ಕಿ.ಮೀ. ಉದ್ದದ ಆಲಮಟ್ಟಿ-ಹುಣಸಿಗಿ-ಯಾದಗಿರಿ ರೈಲು ಮಾರ್ಗದ ಅಂತಿಮ ಸ್ಥಳ ಸಮೀಕ್ಷೆ ಕಾಮಗಾರಿಯನ್ನು ತ್ವರಿತವಾಗಿ ಪ್ರಾರಂಭಿಸುವ ಅಗತ್ಯದ ಬಗ್ಗೆ ಚರ್ಚಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಜಯ್ ಶರ್ಮಾ ಅವರು, ಈ ಯೋಜನೆಯ ಟೆಂಡರ್‌ಗಳನ್ನು ಮುಂದಿನ 90 ದಿನಗಳಲ್ಲಿ ಕರೆಯಲಾಗುವುದು ಮತ್ತು ಕಾಮಗಾರಿಯನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಸಂಸದರಿಗೆ ಭರವಸೆ ನೀಡಿದರು.

ಇದರ ಜೊತೆಗೆ, ರಾಯಚೂರು-ಗಿಣಿಗೇರಾ ರೈಲು ಮಾರ್ಗದ ನಿರ್ಮಾಣ ಕಾರ್ಯವನ್ನು ಶೀಘ್ರವಾಗಿ



ಪೂರ್ಣಗೊಳಿಸುವಂತೆ ಸಂಸದ ಕುಮಾರ ನಾಯಕ್ ಅವರು ಸಿಇಓ ಗೆ ಮನವಿ ಮಾಡಿದರು. ಈ ವಿಷಯವನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡುವುದಾಗಿ ಮತ್ತು ಕಾಮಗಾರಿಯ ತ್ವರಿತ ಪ್ರಗತಿಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಶರ್ಮಾ ಭರವಸೆ ನೀಡಿದ್ದಾರೆ ಎಂದು ವರದಿಯಾಗಿದೆ.

# ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರಕ್ಕೆ ಸಚಿವರ ಭೇಟಿ

**ಕಲಬುರಗಿ,ಜೂ.6-** ನಗರದ ಹೊರವಲಯದ ವಾಜಪೇಯಿ ಬಡಾವಣೆಯಲ್ಲಿ ಸುಮಾರು 10 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಐಎಎಸ್, ಐಪಿಎಸ್, ಕೆಎಎಸ್, ಬ್ಯಾಂಕಿಂಗ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವ ವಿದ್ಯಾರ್ಥಿಗಳಿಗೆ ನೀಡುವ ತರಬೇತಿ ಕೇಂದ್ರವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವೀಕ್ಷಿಸಿದರು. ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಅಗತ್ಯ ತರಬೇತಿ ನೀಡುವುದರ ಜೊತೆಗೆ ಅವರಿಗೆ ಬೇಕಾಗುವ ಪುಸ್ತಕಗಳ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಈ ಕೇಂದ್ರ ಹೊಂದಲಿದೆ.

ಶಾಸಕ ಅಲ್ಲಮಪ್ರಭು ಪಾಟೀಲ,ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಪಂ ಸಿಇಓ ಭಂವರಸಿಂಗ್ ಮೀನಾ ಇತರರು ಉಪಸ್ಥಿತರಿದ್ದರು.



# ಅಂಚೆ ಸಿಬ್ಬಂದಿಗೆ ಸಸಿ ವಿತರಣೆ

**ಬೀದರ್: ಜೂ.6**-ಭಾರತೀಯ ಅಂಚೆ ಇಲಾಖೆಯು ತನ್ನ ಸಿಬ್ಬಂದಿಗೆ ಉಚಿತ ಸಸಿ ವಿತರಿಸುವ ಮೂಲಕ ವಿಶ್ವ ಪರಿಸರ ದಿನವನ್ನು ನಗರದಲ್ಲಿ ಗುರುವಾರ ಅರ್ಥಪೂರ್ಣವಾಗಿ ಆಚರಿಸಿತು. ಪ್ರಧಾನ ಅಂಚೆ ಕಚೇರಿಯಲ್ಲಿ ಬೀದರ್ ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟೆ ಸಿಬ್ಬಂದಿಗೆ ಸಸಿ ವಿತರಿಸಿದರು. ಕಚೇರಿ ಆವರ ಣದಲ್ಲೂ ಸಸಿಗಳನ್ನು ನೆಟ್ಟರು. ಅಂಚೆ ಸಿಬ್ಬಂದಿ ಪರಿಸರ ಸ್ನೇಹಿ ಯಾಗಿ ಬದುಕು ಸಾಗಿಸಬೇಕು. ತಮ್ಮ ಮನೆ ಪರಿಸರದಲ್ಲಿ ತಲಾ ಒಂದು ಸಸಿ ನೆಡಬೇಕು ಎಂದು ವಿ.ಎಲ್. ಚಿತಕೋಟೆ ಸಲಹೆ ಮಾಡಿದರು. ಮಾನವನ ಉಳಿವಿಗೆ ಪ್ರಕೃತಿ ಸಂರಕ್ಷಣೆ ಅಗತ್ಯವಾಗಿದೆ. ಪರಿಸರ ರಕ್ಷಣೆಗೆ ಎಲ್ಲರೂ ಮುಂದಾಗಬೇಕು ಎಂದು ಅಂಚೆ ಉಪ ಅಧೀಕ್ಷಕರಾಗಿ ಅಧಿಕಾರ ವಹಿಸಿಕೊಂಡ ಲೆಫ್ಟಿನೆಂಟ್ ಕರ್ನಲ್ ನಾಗರಾಜ ತಿಳಿಸಿದರು.



ಪ್ರಧಾನ ಅಂಚೆ ಪಾಲಕ ರಾಜೇಂದ್ರ ವಗ್ಗೆ, ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್, ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ವಿಜಯಕುಮಾರ ಫುಲೆ ಮತ್ತಿತರರು ಇದ್ದರು.

ಯುವ ಮಾರ್ಗ

ಶನಿವಾರ : 07–06–2025

# ಟ್ರಂಪ್ –ಮಸ್ಕ್ ಮುಸುಕಿನ ಗುದ್ದಾಟ ಟೆಸ್ಲಾ ಷೇರು ಕುಸಿತ

**ವಾಷಿಂಗ್ಟನ್,ಜೂ.6–** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉದ್ಯಮಿ ಎಲೋನ್ ಮಸ್ಕ್ ನಡುವಿನ ಜಗಳ ಹಾದಿ ರಂಪ ಬೀದಿ ರಂಪವಾದ ಬೆನ್ನಲ್ಲೇ ಟೆಸ್ಲಾ ಕಂಪನಿಯ ಷೇರುಗಳ ಮೌಲ್ಯ ಭಾರೀ ಪ್ರಮಾಣದಲ್ಲಿ ಕುಸಿತ ಕಂಡಿದೆ.

ಡೊನಾಲ್ಡ್ ಟ್ರಂಪ್ ಮತ್ತು ಎಲನ್ ಮಸ್ಕ್ ನಡುವಿನ ಟ್ವಿಟ್ಟರ್ ವಾರ್ ಹೆಚ್ಚಾಗುತ್ತಿದ್ದಂತೆ ಟೆಸ್ಲಾ ಷೇರು ಮೌಲ್ಯ ದಾಖಲೆಯ ಶೇಕಡಾ 14 ರಷ್ಟು ಕುಸಿತವಾಗಿದೆ. ಒಂದೇ ದಿನ ಒಂದು ಷೇರಿನ ಮೌಲ್ಯ 47 ಡಾಲರ್ ಇಳಿದಿದ್ದು ಕಳೆದ 5 ದಿನಗಳಲ್ಲಿ 70 ಡಾಲರ್ ಇಳಿಕೆಯಾಗಿದೆ.

ಅಮೇರಿಕಾದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೊಸ ತೆರಿಗೆ ಮಸೂದೆ ತರಲು ಉದ್ದೇಶಿಸಿರುವುದನ್ನು ವಿರೋಧಿಸಿ ಸಾರ್ವಜನಿಕ ದಕ್ಷತೆ ವಿಭಾಗದ ಮುಖ್ಯಸ್ಥ ಸ್ಥಾನದಿಂದ ಕೆಳಗಿಳಿದ ಬಳಿಕ ಡೊನಾಲ್ಡ್ ಟ್ರಂಪ್ ಮತ್ತು ಎಲನ್ ಮಸ್ಕ್ ನಡುವೆ ಆರೋಪ ಪ್ರತ್ಯಾರೋಪ ತಾರಕಕ್ಕೇರಿದೆ.ಈ ನಡುವೆ ಪ್ರತಿಕ್ರಿಯಿಸಿರುವ ಎಲನ್ ಮಸ್ಕ, ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಉಚ್ಚಾಟಿಸಿ ಉಪಾಧ್ಯಕ್ಷ ಜೆಡಿ ವಾನ್ಸ್ ಅವರನ್ನು ಅಧ್ಯಕ್ಷರನ್ನಾಗಿ ಮಾಡಬೇಕು ಎಂದು ನೀಡಿದ ಹೇಳಿಕೆ ಇಬ್ಬರು ಸ್ನೇಹಿತರ ನಡುವೆ ವಾಕ್ಸಮರ , ಆರೋಪ ಪ್ರತ್ಯಾರೋಪ ಹೆಚ್ಚಾಗಿದೆ.

ಡೊನಾಲ್ಡ್ ಟ್ರಂಪ್ ಪ್ರತಿಕ್ರಿಯಿಸಿ ಉದ್ಯಮಿ ಎಲನ್ ಮಸ್ಕ್ ಅವರ ಟೆಸ್ಲಾ ಕಂಪನಿ



ಜೊತೆ ಮಾಡಿಕೊಂಡಿದ್ದ ಸರ್ಕಾರಿ ಒಪ್ಪಂದಗಳನ್ನು ಕಡಿತಗೊಳಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಇದರಿಂದ ಕಂಪನಿಯ ಷೇರುಗಳ ಮೌಲ್ಯ ಗಣನೀಯವಾಗಿ ಕುಸಿತ ಕಂಡಿದೆಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ಸರ್ಕಾರ ಜಾರಿಗೆ ತರಲು ಮುಂದಾಗಿರುವ ತೆರಿಗೆ ಮಸೂದೆ ಹೆಚ್ಚು ನಷ್ಟಕ್ಕೆ ಕಾರಣವಾಗಲಿದೆ ಎಂದು ಆಗಿನ ಸಾರ್ವಜನಿಕ ಆಡಳಿತ ದಕ್ಷತೆ ವಿಭಾಗದ ಮುಖ್ಯಸ್ಥ ಎಲನ್ ಮಸ್ಕ್ ಹೇಳಿದ್ದರು.ಇದಕ್ಕೆ ಡೊನಾಲ್ಡ್ ಟ್ರಂಪ್ ಅವರು ಅಮೇರಿಕಾದಲ್ಲಿ ಬಹುದೊಡ್ಡ ಸುಧಾರಣೆಗೆ ಈ ಮಸೂದೆ ಸಹಕಾರಿಯಾಗಲಿದ ಎಂದು ಸಮರ್ಥಿಸಿಕೊಂಡಿದ್ದರು.

ಇದರು ಇಬ್ಬರು ನಾಯಕರ ನಡುವೆ ಆರೋಪ ಪ್ರತ್ಯಾರೋಪ ಮತ್ತು ವಯಕ್ತಿಕವಾಗಿ ಹಳೆಯ ಭಾವಚಿತ್ರಗಳನ್ನು ಪ್ರಕಟಿಸುವ ಹಂತಕ್ಕೆ ಬೆಳೆದಿದೆ.ದಿನದಿಂದ ದಿನಕ್ಕೆ ಎಲನ್ ಮಸ್ಕ್ ಅವರು ಸಾಮಾಜಿಕ ಜಾಲತಾಣದ ಮೂಲಕ ಟ್ವೀಟ್ ಮಾಡಿ ಡೊನಾಲ್ಡ್ ಟ್ರಂಪ್ ಮತ್ತು ಅವರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಹಿನ್ನೆಲೆಯಲ್ಲಿ ಕೆರಳಿ ಕೆಂಡವಾಗಿರುವ ಡೊನಾಲ್ಡ್ ಟ್ರಂಪ್, ಟೆಸ್ಲಾ ಕಂಪನಿಯ ಜೊತೆ ಮಾಡಿಕೊಂಡಿರುವ ಒಪ್ಪಂದ ರದ್ದು ಮಾಡುವುದಾಗಿ ಗುಡುಗಿದ್ದಾರೆ

ಇದರ ಜೊತೆಗೆ ಎಲನ್ ಮಸ್ಕ್ ಅವರ ಇಂಟರ್ನೆಟ್ ಕಂಪನಿ ಸ್ಟಾಲಿಂಕ್ ಮತ್ತು ರಾಕೆಟ್ ಕಂಪನಿ ಸ್ಪೇಸ್‌ಎಕ್ಸ್‌ನ ಆದಾಯಕ್ಕೆ ಕೊಕ್ಕೆ ಹಾಕುವುದಾಗಿ ನೇರವಾಗಿ ಎಚ್ಚರಿಕೆ ನೀಡಿದ್ದಾರೆ.ಬಜೆಟ್‌ನಲ್ಲಿ ಹಣವನ್ನು ಉಳಿಸಲು ಸುಲಭವಾದ ಮಾರ್ಗವೆಂದರೆ ಎಲನ್ ಮಸ್ಕ್ ಜೊತೆ ಮಾಡಿಕೊಂಡಿದ್ದ ಸರ್ಕಾರಿ ಸಬ್ಸಿಡಿಗಳು ಮತ್ತು ಒಪ್ಪಂದ ರದ್ದುಗೊಳಿಸುತ್ತೇನೆ ಎಂದಿದ್ದಾರೆ

# ಸತತ ಮೂರನೇ ಬಾರಿ ರೆಪೋ ದರ ಕಡಿತ

**ನವದೆಹಲಿ,ಜೂ. 6–** ಆರ್‌ಬಿಐ ಸತತ ಮೂರನೇ ಬಾರಿ ರೆಪೋ ದರ ಕಡಿತಗೊಳಿಸಿದೆ. ನಿರೀಕ್ಷೆಯಂತೆ ಈ ಬಾರಿ ಬಡ್ಡಿದರವನ್ನು 50 ಮೂಲಾಂಕಗಳಷ್ಟು ಇಳಿಕೆ ಮಾಡಿದೆ. ಇದರೊಂದಿಗೆ ಶೇ. 6ರಷ್ಟಿರುವ ಬಡ್ಡಿದರ ಈಗ ಶೇ. 5.50ಕ್ಕೆ ಇಳಿಕೆಯಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದ್ದಾರೆ.

ಎಂಪಿಸಿ ಸಭೆಯ ನಿರ್ಧಾರದಂತೆ ರೆಪೋ ದರವನ್ನು ಸತತ ಮೂರನೇ ಬಾರಿ ಇಳಿಕೆ ಮಾಡಲಾಗಿದೆ. ಈ ವರ್ಷದ ಆರಂಭದಲ್ಲಿ ರೆಪೋ ದರ ಶೇ. 6.50ರಷ್ಟಿತ್ತು. ಆರು ತಿಂಗಳ ಅವಧಿಯಲ್ಲಿ ಶೇ. 1ರಷ್ಟು ದರ ಇಳಿದಂತಾಗಿದೆ ಎಂದು ಅವರು ಹೇಳಿದರು.

ಈ ಹೊಸ ದರವು ತತ್‌ಕ್ಷಣದಿಂದಲೇ ಜಾರಿಗೆ ಬರಲಿದೆ. ಬಡ್ಡಿದರ ಇಳಿಸಲು ಇದು ಪ್ರಮುಖ ಕಾರಣವಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಸ್ಪಷ್ಟಪಡಿಸಿದರು. ಹಣದುಬ್ಬರ ನಿಯಂತ್ರಣ ದಲ್ಲಿರುವುದರಿಂದ ಆರ್‌ಬಿಐಗೆ ಈ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗಿದೆ. ಜಾಗತಿಕ ಅನಿಶ್ಚಿತ ವಾತಾವರಣದಿಂದ ಹಿನ್ನಡೆಯಲ್ಲಿರುವ



ಆರ್ಥಿಕತೆಗೆ ರೆಪೋ ದರ ಇಳಿಕೆಯು ಪುಷ್ಟಿ ಕೊಡುವ ನಿರೀಕ್ಷೆ ಇದೆ.

ಆರ್‌ಬಿಐ ಹಣಕಾಸು ನಿಲುವು ನ್ಯೂಟ್ರಲ್‌ಗೆ ಬದಲಾವಣೆ ಮತ್ತೊಂದು ಪ್ರಮುಖ ನಿರ್ಧಾರದಲ್ಲಿ ಆರ್‌ಬಿಐ ತನ್ನ ಮಾನಿಟರಿ ಪಾಲಿಸಿ ಸ್ಟಾನ್ ಅಥವಾ ಹಣಕಾಸು ನೀತಿ ನಿಲುವನ್ನು ಬದಲಾಯಿಸಿದೆ. ಅಕಾಮೊಡೇಟಿವ್ ಎಂದಿದ್ದ ನಿಲುವನ್ನು ನ್ಯೂಟ್ರಲ್‌ಗೆ ಬದಲಾಯಿಸಲಾಗಿದೆ. ಕಳೆದ ಬಾರಿಯ ಎಂಪಿಸಿ ಸಭೆಯಲ್ಲಿ ನೀತಿ ನಿಲುವನ್ನು ನ್ಯೂಟ್ರಲ್‌ನಿಂದ ಅಕಾಮೊಡೇಟಿವ್‌ಗೆ ಬದಲಾಯಿಸಲಾಗಿತ್ತು. ಈಗ ವಾಪಸ್ ನ್ಯೂಟ್ರಲ್ ನಿಲುವಿಗೆ ಬರಲಾಗಿದೆ.

ಹಾಗೆಯೇ, ಕ್ಯಾಷ್ ರಿಸರ್ವ್ ರೇಶಿಯೋವನ್ನು 100 ಮೂಲಾಂಕಗಳಷ್ಟು ಇಳಿಕೆ ಮಾಡಲಾಗಿದೆ. ಇದರೊಂದಿಗೆ ಬ್ಯಾಂಕಿಂಗ್ ವ್ಯವಸ್ಥೆಗೆ 2.5 ಲಕ್ಷ ಕೋಟಿ ರೂ ಮೊತ್ತದ ಹಣದ ಹರಿವು ಆಗಲು ಸಾಧ್ಯವಾಗಲಿದೆ. ಇದರಿಂದ ಭಾರತದ ಆರ್ಥಿಕತೆ ಈ ವರ್ಷ (2025–26) ಶೇ. 6.5ರಷ್ಟು ಹೆಚ್ಚಬಹುದು ಹಾಗೆಯೇ, ಹಣದುಬ್ಬರವು ಈ ವರ್ಷ ಶೇ. 3.7ರಷ್ಟು ಇರುವ ಸಾಧ್ಯತೆ ಇದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# 2026ರ ಪುಟ್‌ಬಾಲ್ ವಿಶ್ವಕಪ್‌ಗೆ ಅರ್ಹತೆ ಪಡೆದ 48 ತಂಡಗಳು




**ಲಂಡನ್, ಜೂನ್.6–**ಮುಂದಿನ 2026ಕ್ಕೆ ನಡೆಯಲಿರುವ ವಿಶ್ವಕಪ್ ಪುಟ್‌ಬಾಲ್ ಪಂದ್ಯಾವಳಿಗೆ ಅಮೆರಿಕ, ಮೆಕ್ಸಿಕೊ ಮತ್ತು ಕೆನಡಾ ಜಂಟಿಯಾಗಿ ಆತಿಥ್ಯವಹಿಸಲಿದ್ದು,ದಾಖಲೆಯ 48 ತಂಡಗಳು ಭಾಗ ವಹಿಸಲಿವೆ. ಕೊನೆಯದ್ದಾಗಿ ಉಜ್ಬೆಕಿಸ್ತಾನ್, ಜೋರ್ಡಾನ್ ಮತ್ತು ದಕ್ಷಿಣ ಕೊರಿಯಾ ಅರ್ಹತೆ ಪಡೆದಿದೆ.

ನಲವತ್ತೂರು ದೇಶದ ತಂಡಗಳು ಅರ್ಹತಾ ಪ್ರಕ್ರಿಯೆಯ ಮೂಲಕ ತಮ್ಮ ಸ್ಥಾನಗಳನ್ನು ಪಡೆಯುತ್ತವೆ. ಆರು ತಂಡಗಳನ್ನು ಅಂತರರಾಷ್ಟ್ರೀಯ ಪ್ಲೇಆಫ್‌ಗಳಲ್ಲಿ ಇನ್ನೆರಡು ತಮ್ಮ ಸ್ಥಾನವನ್ನು ಭದ್ರಪಡಿಸಿಕೊಳ್ಳುತ್ತವೆ ಮೂರು ಆತಿಥೇಯ ದೇಶಗಳು ಸ್ವಯಂಚಾಲಿತವಾಗಿ ಅರ್ಹತೆ ಪಡೆಯುತ್ತವೆ.

ಏಷ್ಯಾದ ಎಂಟು ಮತ್ತು ಇಂಟರ್‌ಕಾಂಟಿನೆಂಟಲ್‌ನಲ್ಲಿ ಪ್ಲೇಆಫ್‌ನಲ್ಲಿ ಒಂದು ಸ್ಥಾನಗಳನ್ನು ಹೊಂದಿರುತ್ತದೆ. ಆಫ್ರಿಕಾ ಖಂಡದಿಂದ ಒಂಬತ್ತು ನೇರ ಸ್ಥಾನಗಳನ್ನು ಹೊಂದಿದೆ ಜೊತೆಗೆ ಇಂಟರ್‌ಕಾಂಟಿನೆಂಟಲ್ ಪ್ಲೇಆಫ್‌ಗೆ ಒಂದು ಸ್ಥಾನ ಹೊಂದಿದೆ. ಉತ್ತರ ಮತ್ತು ಮಧ್ಯ ಅಮೆರಿಕ ಮತ್ತು ಕೆರಿಬಿಯನ್ ಮೂರು ನೇರ ಸ್ಥಾನಗಳನ್ನು ಮತ್ತು ಇಂಟರ್‌ಕಾಂಟಿನೆಂಟಲ್ ಪ್ಲೇಆಫ್‌ಗಳಲ್ಲಿ ಮತ್ತೆರಡು ಸ್ಥಾನಗಳನ್ನು ಪಡೆಯುತ್ತವೆ.

ದಕ್ಷಿಣ ಅಮೆರಿಕಾ ಆರು ನೇರ ಸ್ಥಾನಗಳನ್ನು ಹೊಂದಿದ್ದು, ಇನ್ನೊಂದು ತಂಡವನ್ನು ಇಂಟರ್‌ಕಾಂಟಿನೆಂಟಲ್ ಪ್ಲೇಆಫ್‌ಗೆ ಕಳುಹಿಸುತ್ತದೆ. ನ್ಯೂಜಿಲೆಂಡ್ ಜೊತೆಗೆ ಮುಂದಿನ ವಿಶ್ವಕಪ್‌ನಲ್ಲಿ ಯುರೋಪ್‌ನಲ್ಲಿ 16 ತಂಡಗಳು ಖಚಿತವಾಗಿ ಆಡಲಿವೆ.

# ಅಮರನಾಥ ಯಾತ್ರೆಗೆ ಬಿಗಿ ಭದ್ರತೆ



**ನವದೆಹಲಿ,ಜೂ.6:–**ಜಮ್ಮು ಮತ್ತು ಕಾಶ್ಮೀರದ ಪಹಲ್ಗಾನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ನಂತರ, ಸರ್ಕಾರವು ಅಮರನಾಥ ಯಾತ್ರೆ ಯ ಭದ್ರತೆಯನ್ನು ಹೆಚ್ಚಿಸಿದೆ.

ಇದೇ ಮೊದಲ ಬಾರಿಗೆ, ಭದ್ರತಾ ಕಾರಣಗಳಿಂದಾಗಿ ಅಮರನಾಥ ಯಾತ್ರೆಯನ್ನು 38 ದಿನಗಳಿಗೆ ಇಳಿಸಲಾಗಿದೆ. 2024 ರಲ್ಲಿ, ಈ ಯಾತ್ರೆ 52 ದಿನಗಳಿಂದ ಕೂಡಿತ್ತು.

ಯಾತ್ರಿಕರ ಸುರಕ್ಷತೆಯ ಬಗ್ಗೆ ಕೇಂದ್ರ ಸರ್ಕಾರ ಕಟ್ಟುನಿಟ್ಟಿನ ಎಚ್ಚರಿಕೆ ವಹಿಸಿದೆ. ಒಂದು ಹಕ್ಕಿ ಕೂಡ ಹಾರಲು ಸಾಧ್ಯವಾಗದಷ್ಟು ಬಿಗಿ ಭದ್ರತೆ ಇರಲಿದೆ . ಅಮರನಾಥ ಯಾತ್ರೆಯ ಸಮಯದಲ್ಲಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ (ಸಿಎಆರ್ ಎಫ್) ಒಟ್ಟು 581 ಕಂಪನಿಗಳನ್ನು ನಿಯೋಜಿಸಲಾಗಿದೆ.ಇದರ ಹೊರತಾಗಿ, ಸುಮಾರು 58,000 ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಸಿಬ್ಬಂದಿ ಅಮರನಾಥ ಯಾತ್ರೆಯ ಮಾರ್ಗದಲ್ಲಿ ಯಾತ್ರಿಕರನ್ನು ರಕ್ಷಿಸಲಿದ್ದಾರೆ

ಜುಲೈ 3 ರಿಂದ ಆಗಸ್ಟ್ 9 ರವರೆಗೆ ನಡೆಯಲಿರುವ ಈ ಅಮರನಾಥ ಯಾತ್ರೆಗೆ ಭದ್ರತಾ ಸಂಸ್ಥೆಗಳು ವಿವರವಾದ ಲ್ಲಾ ರಸ್ತೆಗಳನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗುತ್ತದೆ ಸಿಆರ್‌ಪಿಎಫ್, ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮತ್ತು ಸೇನೆಯ ಜಂಟಿ ಯೋಜನೆಯಡಿಯಲ್ಲಿ, ಅಮರನಾಥ ಯಾತ್ರೆಯ ಎಲ್ಲಾ ಮಾರ್ಗಗಳ ಭದ್ರತಾ ಲೆಕ್ಕಪರಿಶೋಧನೆಯನ್ನು ಮಾಡಲಾಗಿದೆ. ಡಿಜಿಟಲ್ ಮ್ಯಾಪಿಂಗ್ ಮೂಲಕ ಯಾತ್ರಿಕರ ಚಲನವಲನಗಳನ್ನು ಮೇಲ್ವಿಚಾರಣೆ ಮಾಡಲಾಗುತ್ತದೆ. ಈ ಬಾರಿ, ಪ್ರತಿಯೊಬ್ಬ ಯಾತ್ರಿಕ ಮತ್ತು ಕುದುರೆ ಸವಾರರಿಗೂ ಡಿಜಿಟಲ್ ಗುರುತಿನ ಚೀಟಿಯನ್ನು ನೀಡಲಾಗುವುದು, ಇದರಿಂದ ಪ್ರತಿಯೊಬ್ಬ ವ್ಯಕ್ತಿಯ ಗುರುತನ್ನು ಖಚಿತಪಡಿಸಿಕೊಳ್ಳಬಹುದು.

# 32 ಉಗ್ರರ ಅಡ್ಡೆಗಳ ಮೇಲೆ ಎನ್‌ಐಎ ದಾಳಿ

**ಕಾಶ್ಮೀರ, ಜೂ. 6–** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದ ಬಳಿಕ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ. ಜತೆಗೆ ಭಯೋತ್ಪಾದನೆ ವಿರುದ್ಧ ಸಮರ ಸಾರಲಾಗುತ್ತಿದೆ. ಹಾಗೂ ಉಗ್ರರ 32 ಅಡ್ಡೆಗಳ ಮೇಲೆ ನಿರಂತರ ದಾಳಿ ನಡೆಸಲಾಗಿದೆ.

ಇದೀಗ ಎನ್‌ಐಎ ಕಾಶ್ಮೀರದ 32 ಕಡೆಗಳಲ್ಲಿ ದಾಳಿ ನಡೆಸಿ, ಮದ್ದುಗುಂಡುಗಳು ಹಾಗೂ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ. ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಸಂಘಟನೆಗಳು ಮತ್ತು ಅವುಗಳ ಶಾಖೆಗಳಿಂದ ನಡೆಯುತ್ತಿರುವ ಭಯೋತ್ಪಾದಕ ಪಿತೂರಿಯ ವಿರುದ್ಧ ನಡೆಯುತ್ತಿರುವ ತನಿಖೆಯ ಭಾಗವಾಗಿ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಕಾಶ್ಮೀರ ಕಣಿವೆಯ ವಿವಿಧ ಸ್ಥಳಗಳಲ್ಲಿ ಸರಣಿ ಶೋಧ ನಡೆಸಿತು.

ಕಾರ್ಯಾಚರಣೆಯ ಭಾಗವಾಗಿ ಒಟ್ಟು ಮೂವತ್ತೆರಡು ಸ್ಥಳಗಳ ಮೇಲೆ ದಾಳಿ ನಡೆಸಲಾಯಿತು. ಇವುಗಳಲ್ಲಿ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಗಳಾದ ದಿ ರೆಸಿಸ್ಟೆನ್ ಫ್ರಂಟ್ (ಟಿಆರ್‌ಎಫ್), ಯುನೈಟೆಡ್ ಲಿಬರೇಶನ್ ಫ್ರಂಟ್, ಜಮ್ಮು ಮತ್ತು ಕಾಶ್ಮೀರ (ಯುಎಲ್‌ಎಫ್‌ಜೆಂಡ್‌ಕೆ), ಮುಜಾಹಿದ್ದೀನ್ ಗಜ್ವತ್–ಉಲ್–ಹಿಂದ್ (ಎಂಜಿಹೆಚ್), ಜಮ್ಮು ಮತ್ತು ಕಾಶ್ಮೀರ ಸ್ವಾತಂತ್ರ್ಯ ಹೋರಾಟಗಾರರು (ಜೆಕೆಎಫ್‌ಎಫ್), ಕಾಶ್ಮೀರ ಟೈಗರ್ಸ್,




ಪಿಎಎಫ್ ಮತ್ತು ಇತರರೊಂದಿಗೆ ಸಂಬಂಧ ಹೊಂದಿರುವ ಭಯೋತ್ಪಾದಕರು ಮತ್ತು ಭೂಗತ ಪಾತಕಿಗಳ ಮನೆಗಳೂ ಸೇರಿವೆ.

ಇವು ಲಷ್ಕರ್–ಎ–ತೋಯ್ಬಾ (ಎಲ್‌ಇಟಿ), ಜೈಶ್–ಎ–ಮೊಹಮ್ಮದ್ (ಜೆಇಎಂ), ಅಲ್–ಬದರ್ ಮತ್ತು ಇತರ ನಿಷೇಧಿತ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಯೋಜಿತವಾಗಿವೆ.ಮ್ಯಾಗ್ನೆಟಿಕ್ ಬಾಂಬ್‌ಗಳು, ಐಇಡಿಗಳು, ನಿಧಿಗಳು, ಮಾದಕ ವಸ್ತುಗಳು ಮತ್ತು ಶಸ್ತ್ರಾಸ್ತ್ರ, ಮದ್ದುಗುಂಡುಗಳನ್ನು ಸಂಗ್ರಹ ಮತ್ತು ವಿತರಿಸುವುದು ಮುಂತಾದ ಭಯೋತ್ಪಾದಕ ಚಟುವಟಿಕೆಗಳನ್ನು ಬೆಂಬಲಿಸುವಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಶೋಧ ನಡೆಸಲಾಯಿತು. ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿ ಮತ್ತು ಕೋಮು ಸಾಮರಸ್ಯವನ್ನು ಕದಡಲು ಸ್ಥಳೀಯ ಯುವಕರನ್ನು ಮೂಲಭೂತವಾದಿಗಳಾಗಿ ಮತ್ತು ಉಗ್ರರನ್ನಾಗಿ ಸಜ್ಜುಗೊಳಿಸುವ ಮೂಲಕ ಕಣಿವೆಯಲ್ಲಿ ಭಯೋತ್ಪಾದಕ ಚಟುವಟಿಕೆಗಳು ಮತ್ತು ಹಿಂಸಾಚಾರಕ್ಕೆ ಸಂಚು ರೂಪಿಸುತ್ತಿವೆ.

ಪಾಕಿಸ್ತಾನ ಮೂಲದ ಕಾರ್ಯಕರ್ತರು ಭಯೋತ್ಪಾದನೆಯನ್ನು ಉತ್ತೇಜಿಸಲು ಸಾಮಾಜಿಕ ಮಾಧ್ಯಮ ಮತ್ತು ಆನ್‌ಲೈನ್ ಅಪ್ಲಿಕೇಶನ್‌ಗಳನ್ನು ಬಳಸುತ್ತಿದ್ದಾರೆ ಎಂದು ತನಿಖೆಗಳು ಬಹಿರಂಗಪಡಿಸಿವೆ. ಕಾಶ್ಮೀರ ಕಣಿವೆಯಲ್ಲಿರುವ ತಮ್ಮ ಕಾರ್ಯಕರ್ತರು ಮತ್ತು ಕಾರ್ಯಕರ್ತರಿಗೆ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳು, ಸ್ಫೋಟಕಗಳು, ಮಾದಕ ದ್ರವ್ಯಗಳು ಮತ್ತು ಇತರ ಲಾಜಿಸ್ಟಿಕ್ಸ್ ಅನ್ನು ತಲುಪಿಸಲು ಅವರು ಡ್ರೋನ್‌ಗಳನ್ನು ಬಳಸುತ್ತಿದ್ದರು.ಇಂದು ಪ್ರಧಾನಿ ಮೋದಿ ಅವರು ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು 46 ಸಾವಿರ ಕೋಟಿ ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.

# ಬಿಹಾರದಲ್ಲೂ ಬುಲ್ಡೋಜರ್ ಆಕ್ಷನ್

**ಮುಜಫರ್‌ಪುರ್, ಜೂ. 6–** ಬಿಹಾರದ ಮುಜಫರ್‌ಪುರ ಜಿಲ್ಲೆಯಲ್ಲಿ ಅತ್ಯಾಚಾರ ಆರೋಪಿಯೊಬ್ಬನ ಮನೆಯನ್ನು ನೆಲಸಮ ಮಾಡಲಾಗಿದೆ.ಇಲ್ಲಿನ ನಿವಾಸಿಯೊಬ್ಬರು ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪ ಹೊತ್ತಿದ್ದು, ಪೊಲೀಸರು ಮತ್ತು ಸ್ಥಳೀಯ ಆಡಳಿತದ ಮೇಲ್ವಿಚಾರಣೆಯಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಅವರ ಮನೆ ಮತ್ತು ಉಪಾಹಾರ ಗೃಹವನ್ನು ಧ್ವಂಸಗೊಳಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕುರ್ಹಾನಿ ಉಪವಿಭಾಗದ ಟರ್ಕಿ ಪೊಲೀಸ್ ಠಾಣೆ ಪ್ರದೇಶದಲ್ಲಿ ಈ ಕಾರ್ಯಾಚರಣೆ ನಡೆದಿದೆ, ಅಲ್ಲಿ ಲೈಂಗಿಕ ದೌರ್ಜನ್ಯದಲ್ಲಿ ಗಾಯಗೊಂಡು ದಲಿತ ಅಪ್ರಾಪ್ತ ಬಾಲಕಿ ಸಾವನ್ನಪ್ಪಿದ ಘಟನೆ ಹೆಚ್ಚು ಚರ್ಚೆಗೆ ಗ್ರಾಸವಾಗಿದೆ.ನೆರೆಹೊರೆಯಲ್ಲಿ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ನಂತರ ಪರಾರಿಯಾಗಿದ್ದ ಆರೋಪಿಯ ಆಸ್ತಿಗಳನ್ನು ನಾವು ಮುಟ್ಟುಗೋಲು ಹಾಕಿಕೊಂ



ಡಿದ್ದೇವೆ.ಇಂದು, ಮಣ್ಣು ತೆಗೆಯುವ ಯಂತ್ರಗಳನ್ನು ತರಲಾಯಿತು ಮತ್ತು ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ (ಪಶ್ಚಿಮ) ಶ್ರೇಯಾ ಶ್ರೀ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಯಿತು ಎಂದು ಎಸ್ಪಿ (ಗ್ರಾಮೀಣ) ವಿದ್ಯಾ ಸಾಗರ್ ಮಾಹಿತಿ ನೀಡಿದ್ದಾರೆ.

ಪೊಲೀಸರ ಕೈಯಿಂದ ತಪ್ಪಿಸಿಕೊಳ್ಳುತ್ತಿದ್ದ ಆರೋಪಿ ಶರಣಾಗಿದ್ದಾನೆ. ನ್ಯಾಯಾಲಯದ ನಿರ್ದೇಶನದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಸ್ಪಿ ಹೇಳಿದರು.ಉತ್ತರ ಪ್ರದೇಶದ ಪಕ್ಕದ ರಾಜ್ಯದಲ್ಲಿ ಯೋಗಿ ಆದಿತ್ಯನಾಥ್ ಅವರ ಬುಲ್ಡೋಜರ್ ನ್ಯಾಯ ಮಾದರಿಯಿಂದ ಪ್ರೇರಿತವಾಗಿದೆ ಎಂದು ಸ್ಥಳೀಯರು ನಂಬುವ ಈ ಕ್ರಮ, ಬಿಹಾರದ ಉಪಮುಖ್ಯಮಂತ್ರಿ ವಿಜಯ್ ಕುಮಾರ್ ಸಿನ್ಹಾ ಜಿಲ್ಲೆಗೆ ಭೇಟಿ ನೀಡಿ ಎರಡೂ ಅತ್ಯಾಚಾರ ಪ್ರಕರಣಗಳಲ್ಲಿ ಅಪರಾಧಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪ್ರತಿಜ್ಞೆ ಮಾಡಿದ ಕೆಲವೇ ಗಂಟೆಗಳ ನಂತರ ನಡೆದಿದೆ, ಇದು ನಿತೀಶ್ ಕುಮಾರ್ ಸರ್ಕಾರವನ್ನು ತೀವ್ರ ವಿರೋಧ ಪಕ್ಷಗಳ ಟೀಕೆಗೆ ಗುರಿಪಡಿಸಿದೆ.

ಆರೋಪಿಗಳ ವಿರುದ್ಧದ ಕ್ರಮವು ಘೋರ ಅಪರಾಧಗಳನ್ನು ಮಾಡುವ ಪ್ರವೃತ್ತಿಯನ್ನು ಹೊಂದಿರುವ ಎಲ್ಲರಿಗೂ ಜ್ಞಾಪನೆಯಾಗಬೇಕು. ಅವರು ಕಾನೂನಿನ ದೀರ್ಘ ತೋಳುಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಸಾಗರ್ ಹೇಳಿದರು.

# ಪರಿಸರ ದಿನಾಚರಣೆ ಅಂಗವಾಗಿ ಸಸಿಗಳ ವಿತರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.6–**ಪಟ್ಟಣದ ಮಾರನಾತ ಬೈಬಲ್ ಮಿಷನ್ ಪೆನೂಯೋಲು ಮಹಿಮ ಮಂದಿರದಲ್ಲಿ ನಡೆದ ಮುಂಗಾರಿನಲ್ಲಿ ಉತ್ತಮ ಮಳೆ ಹಾಗೂ ಬೆಳೆಗಾಗಿ ವಿಶೇಶ ಪ್ರಾರ್ಥನೆ ಹಾಗೂ ಪರಿಸರ ದಿನಾಚರಣೆ ಕರ್ಯಕ್ರಮದಲ್ಲಿ ರೆವರೆಂಡ್ ಫಾದರ್ ಜಿ.ವಿಜಯಪಾಲ್ ರೈತರಿಗಾಗಿ ವಿಶೇಷ ಪ್ರರ್ಥನೆ ಸಲ್ಲಿಸಿದರು.ನಂತರ 15ಕ್ಕೂ ಹೆಚ್ಚು ಪ್ರಗತಿ ಪರ ರೈತರನ್ನು ಸನ್ಮಾನಿಸಿ ಗೌರವಿಸಿ ವಿವಿಧ ತಳಿಯ ಹಣ್ಣಿನ ಗಿಡಗಳನ್ನು ವಿತರಿಸಲಾಯಿತು.ಇಸಾಕ್,ತಿಮೋತಿ,ಮನೋಹರ್,ಸುರೇಶ್,ಅಬ್ರಾಹಂ,ಸೇರಿದಂತೆ ಇನ್ನಿತರರು ಇದ್ದರು.

# ವಿಶೇಷಚೇತನರಿಗೆ ತ್ರಿಚಕ್ರ ವಾಹನ ಖರೀದಿಗೆ ಅರ್ಜಿ

**ರಾಯಚೂರು,ಜೂ.6–** ಸಿಂಧನೂರು ನಗರಸಭೆ ಕಾರ್ಯಲಯದಿಂದ 2023–24ನೇ ಸಾಲಿನ ಎಸ್.ಎಫ್.ಸಿ (ಮುಕ್ತ ನಿಧಿ) ಅನುದಾನಗಳ ಶೇ.5ರ ಯೋಜನೆಗಳಿಗೆ ಕಾಯ್ದಿರಿಸಲಾದ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ವಿಕಲಚೇತನರಿಗೆ ತ್ರಿಚಕ್ರ ವಾಹನ ಖರೀದಿಸಿ ನೀಡಲು ಅವಕಾಶ ಕಲ್ಪಿಸಲಾಗಿದೆ.

ಇದಕ್ಕೆ ಸಂಬಂಧಿಸಿದ ಪೂರ್ಣ ವಿವರದ ಪ್ರಕಟಣೆಯನ್ನು ನಗರಸಭೆ ಕಾರ್ಯಾಲಯ ನೋಟೀಸ್ ಫಲಕದಲ್ಲಿ ಲಗತ್ತಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ http:// www.sindhanurcity.mrc.gov.in/ ನಲ್ಲಿ ಮಾಹಿತಿಯನ್ನು ಡೌನ್‌ಲೋಡ್ ಮಾಡಿ ವಿವರ ಪಡೆದುಕೊಳ್ಳಬಹುದು.

ಅರ್ಹ ಫಲಾನುಭವಿಗಳು ವೈಯಕ್ತಿಕ ಚಟುವಟಿಕೆವಾರು ತಿಳಿಸಿರುವ ಅಗತ್ಯ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳ ಧೃಢೀಕರಣದೊಂದಿಗೆ ಜೂನ್ 20ರ ಸಂಜೆ 5.30 ರೊಳಗೆ ಅರ್ಜಿ ಸಲ್ಲಿಸಬೇಕು. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ಪ್ರಕಟಣೆಯಲ್ಲಿನ ಪ್ರಚುರಪಡಿಸಲಾದ ವೈಯ್ಯಕ್ತಿಕ ಚಟುವಟಿಕೆಗಳ ಯೋಜನೆಗಳ ಬಗ್ಗೆ ಸಮರ್ಪಕವಾಗಿ ತಿಳಿದು ಅರ್ಜಿಗಳನ್ನು ಸಲ್ಲಿಸಬೇಕೆಂದು ಸಿಂಧನೂರು ನಗರಸಭೆ ಕಾರ್ಯಲಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಕಾರದ ಸುತ್ತೋಲೆಯನ್ವಯ ಶೇ.5 ಯೋಜನೆಗಳಿಗೆ ಫಲಾನುಭವಿಗಳ ಆಯ್ಕೆ ಸಂದರ್ಭದಲ್ಲಿ ಅತೀ ಹಿಂದುಳಿದ, ಕಡುಬಡವರಿಗೆ ಹಾಗೂ ಪೌರಕಾರ್ಮಿಕರುಗಳಿಗೆ ಆದ್ಯತೆ ನೀಡಲಾಗುವುದು. ಪ್ರಯುಕ್ತ ಅರ್ಜಿ ಸಲ್ಲಿಸುವ ಫಲಾನುಭವಿಗಳು ಕುಟುಂಬದ ಆದಾಯ ಕುರಿತು ಹಾಗೂ ಇತರ ಯಾವುದೇ ದಾಖಲಾತಿಗಳ ತಪ್ಪು ಮಾಹಿತಿ ನೀಡಿ ಸದರಿ ಯೋಜನೆಯಡಿ ಸೌಲಭ್ಯ / ಸಹಾಯಧನ ಪಡೆದಿದ್ದು ಕಂಡು ಬಂದಲ್ಲಿ ತಪ್ಪು ನಿರೂಪಣೆ ಮೇರೆಗೆ ಪಡೆಯಲಾದ ಸೌಲಭ್ಯ/ಸಹಾಯಧನದ ಮೊತ್ತವನ್ನು ದಂಡಸಮೇತ ವಸೂಲಿ ಮಾಡಿ ಕಾನೂನು ಕ್ರಮ ಜರುಗಿಸಲಾಗವುದು. ಆದ್ದರಿಂದ ಅರ್ಹ ಫಲಾನುಭವಿಗಳು ಮಾತ್ರ ಅರ್ಜಿ ಸಲ್ಲಿಸಿ ಸೌಲಭ್ಯಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

# ಬಾಡಿಗೆ ವಾಹನ ಒದಗಿಸಲು ಅರ್ಜಿ ಆಹ್ವಾನ

**ರಾಯಚೂರು,ಜೂ.6–**ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧೀನದಲ್ಲಿರುವ ಜಿಲ್ಲಾ ಕುಷ್ಠರೋಗ ನಿವಾರಣಾ ಅಧಿಕಾರಿಗಳ ಕಾರ್ಯಲಯ ವಿಭಾಗಕ್ಕೆ 2025–26ನೇ ಸಾಲಿಗಾಗಿ 4 ಚಕ್ರದ 1 ಬಾಡಿಗೆ ವಾಹನ ಒದಗಿಸಲು ಮತ್ತು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳ ವಿಭಾಗಕ್ಕೆ 2025–26ನೇ ಸಾಲಿಗಾಗಿ 4 ಚಕ್ರದ 1 ಬಾಡಿಗೆ ವಾಹನವನ್ನು ಒದಗಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು ಜೂನ್–17ರ ಸಂಜೆ 5ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕುಷ್ಠರೋಗ ನಿವಾರಣ ಅಧಿಕಾರಿಗಳ ಕಾರ್ಯಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಕುಷ್ಠರೋಗ ನಿವಾರಣಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ತಾಲೂಕಿಗೆ ದ್ವಿತೀಯ ರ್‍ಯಾಂಕ್ ಪಡೆದ ವರ್ಷಾ ಮೇಟಿಗೆ ಸನ್ಮಾನ

ಯುವ ಮಾರ್ಗ ಸುದ್ದಿ



**ಮಾನ್ವಿ,ಜೂ.6–**2024–25ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ತಾಲೂಕಿಗೆ ದ್ವಿತೀಯ ರ್‍ಯಾಂಕ್ ಗಳಿಸಿ, ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ ಕಾಕತಿಯ ಪ್ರೌಢಶಾಲೆಯ ವಿದ್ಯಾರ್ಥಿನಿ ವರ್ಷಾ ಮೇಟಿ ಅವರಿಗೆ ಮಾನ್ವಿ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಶುಕ್ರವಾರ ಪಟ್ಟಣದ ಬಿ.ವಿ. ಆರ್. ಪ್ರೌಢಶಾಲೆಯಲ್ಲಿ ನಡೆದ ಸಭೆಯಲ್ಲಿ ಒಕ್ಕೂಟದ ಅಧ್ಯಕ್ಷರಾದ ಹೆಚ್. ಶರ್ಫುದ್ದೀನ್ ಪೋತ್ನಾಳ್ ಅವರು ಕುಮಾರಿ ವರ್ಷಾ ಮೇಟಿ ಅವರ ಸಾಧನೆಯನ್ನು ಅಭಿನಂದಿಸಿದರು. ಅವರ ಮುಂದಿನ ವಿದ್ಯಾಭ್ಯಾಸ ಇನ್ನಷ್ಟು ಉತ್ತಮ ರೀತಿಯಲ್ಲಿ ಕೂಡಿರಲಿ ಹಾಗೂ ಜಿಲ್ಲೆ ಮತ್ತು ರಾಜ್ಯಮ ಟ್ಟಕ್ಕೂ ಅವ ರು ರ್‍ಯಾಂಕ್ ಪಡೆ ಯುವಂತಾ ಗಲಿ ಎಂದು ಶುಭ ಹಾರೈಸಿ ದರು. ವರ್ಷಾ ಮೇಟಿ ಅವರು 625ಕ್ಕೆ 621 ಅಂಕಗಳನ್ನು ಗಳಿಸಿ ಈ ಸಾಧನೆ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಒಕ್ಕೂಟದ ಪದಾಧಿಕಾರಿಗಳಾದ ಶೇಕ್ ಫರೀದ್ ಉಮ್ರಿ, ಎಂ.ಎ.ಹೆಚ್. ಮುಕೀಮ್,ರಾಜಾಸುಭಾಷ್ ಚಂದ್ರ ನಾಯಕ್, ಕೆ.ಇ.ನರ 'ಸಿಂಹ, ಬಿ.ವಿ.ರೆಡ್ಡಿ, ಶ್ರೀನಿವಾಸ್, ಮನೋಜ್ ಮಿಶ್ರಾ, ಅನಿಲ್ ಕುಮಾರ್.ಹೆಚ್., ಭೀಮರಾಯ ಸಿತಿಮನಿ, ಅಖಿಲೇಶ್ ಕುರುಡಿ, ಸೈಯದ್ ಅಹಮದ್ ಹುಸೇನಿ ಮತವಲೆ, ಪ್ರಭು ಟಕ್ಕಳಕಿ, ಮಹಾಂತೇಶ್ ಓಲೆಕಾರ, ಆಲೀಮ್ ಖಾನ್, ಶಂಕ್ರಪ್ಪ ಅಂಗಡಿ, ಹುಸೇನ್ ಬಾಷಾ, ಕೆ.ವಿಜಯಲಕ್ಷ್ಮಿ, ಸರಿತಾ ಜೈನ್, ಮೊಹಮ್ಮದ್ ಹಾರೂನ್, ಉಸೇನ್ ಬಾಷಾ, ಅಂಜನ ರೆಡ್ಡಿ, ಕಾಕತಿಯ ಶಾಲೆಯ ಮುಖ್ಯೋಪಾಧ್ಯಾಯರು ವೀರಭದ್ರಗೌಡ, ದತ್ತಾತ್ರೇಯ ಮೇಟಿ ಅವರೂ ಈ ಸಂದರ್ಭದಲ್ಲಿ ಹಾಜರಿದ್ದರು. ರಾಜು ತಾಳಿಕೋಟೆ ಕಾರ್ಯಕ್ರಮವನ್ನು ನಿರೂಪಿಸಿದರು.

# ಕಾಲ್ತುಳಿತ ಪ್ರಕರಣ ಉದ್ದೇಶಪೂರ್ವಕ ಲೋಪ ಅಲ್ಲ:ಪ್ರಿಯಾಂಕ್ ಸಮರ್ಥನೆ



**ಕಲಬುರಗಿ,ಜೂ.6–** ಆರ್.ಸಿ.ಬಿ ತಂಡದ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ 11 ಅಮಾಯಕರು ಸಾವಿಗೀಡಾಗಿದ್ದರ ಬಗ್ಗೆ ಸರ್ಕಾರಕ್ಕೆ ವಿಷಾದವಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಉದ್ದೇಶಪೂರ್ವಕ ಲೋಪ ಆಗಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿ–ಬಿಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡರು.

ಇಲ್ಲಿನ ಐವಾನ್–ಎ–ಶಾಹಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಘಟನೆಗೆ ಸಂಬಂಧಪಟ್ಟಂತೆ ಈಗಾಗಲೇ ಬೆಂಗಳೂರು ಪೊಲೀಸ್ ಕಮಿಷನರ್ ದಯಾನಂದ ಒಳಗೊಂಡಂತೆ ಕಾರ್ಯವ್ಯಾಪ್ತಿಯ ಎಲ್ಲ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಪೊಲೀಸರು ವಿಜಯೋತ್ಸವಕ್ಕೆ ಅನುಮತಿ ನೀಡಿರಲಿಲ್ಲ. ಮೇಲಾಗಿ, ಇದ್ದಕ್ಕಿದ್ದಂತೆ ಮೂರು ಲಕ್ಷಕ್ಕೂ ಅಧಿಕ ಜನರು ಒಂದೆಡೆ ಜಮಾವಣೆ ಆಗಿದ್ದರಿಂದ ಇಂಥದ್ದೊಂದು ದುರ್ಘಟನೆಗೆ ಹಾದಿ ಮಾಡಿಕೊಟ್ಟಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಹಿಂದೆ ಗೆಲುವು ಸಾಧಿಸಿದ ಬಳಿಕ ಎರಡು ದಿನ ಬಿಟ್ಟು ವಿಜಯೋತ್ಸವ ಏರ್ಪಡಿಸಲಾಗಿತ್ತು. ಆದರೆ, ಈ ಬಾರಿ ಕೇವಲ 24 ತಾಸುಗಳೊಳಗೆ ಸಂಭ್ರಮಾಚರಣೆಗೆ ಸಿದ್ದತೆ ಮಾಡಿಕೊಳ್ಳಲಾಗಿತ್ತು. ಬಂದೋಬಸ್ತ್ ಗೆ ಸಂಬಂಧಿಸಿದಂತೆ ಪೊಲೀಸರು ಅನುಮತಿ ನಿರಾಕರಣೆ ಮಾಡಿರುವ ಕುರಿತು ಸಹ ದಾಖಲೆಗಳಿವೆ ಎಂದರು.

ಇನ್ನು, ದುರ್ಘಟನೆಗೆ ಸಂಬಂಧಿಸಿದಂತೆ ರಾಜ್ಯದ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಗೃಹ ಸಚಿವರು ಹೊಣೆಗಾರಿಕೆ ಸ್ವೀಕರಿಸಿದ್ದಾರೆ. ಇದರಲ್ಲಿ ಉದ್ದೇಶಪೂರ್ವಕವಾದ ಲೋಪವಾಗಿಲ್ಲ ಎಂದ ಮೇಲೆ ರಾಜೀನಾಮೆಗೆ ಒತ್ತಾಯಿಸುವುದು ಸರಿಯಲ್ಲ ಎಂದು ಸಚಿವ ಪ್ರಿಯಾಂಕ್ ನುಡಿದರು. ಇದೇವೇಳೆ, ಬಿಜೆಪಿ ಮುಖಂಡರ ವಿರುದ್ಧ ವಾಗ್ದಾಳಿ ನಡೆಸಿದ ಸಚಿವ ಪ್ರಿಯಾಂಕ್, ಬಿಜೆಪಿಯವರು ರಣಹದ್ದುಗಳಿದ್ದಂತೆ. ಅವರಿಗೆ ಸಾವಿನ ಮೇಲೆ ರಾಜಕಾರಣ ಮಾಡುವುದರಿಂದ ಎಲ್ಲಿಲ್ಲದ ಖುಷಿ ಲಭಿಸುತ್ತದೆ. ಇಷ್ಟಕ್ಕೂ ಅವರು ಸಾವಿನ ಮೇಲೆ ರಾಜಕಾರಣ ಮಾಡುವುದು ಇದೇ ಮೊದಲೇನೂ ಅಲ್ಲವಲ್ಲ ಎಂದು ವಿಷಾದಿಸಿದರು.

ಒಂದಂತು ನಿಜ. ವಿಧಾನಸೌಧದ ಎದುರು ಆರ್.ಸಿ.ಬಿ ಆಟಗಾರರಿಗೆ ಸನ್ಮಾನ ಸಮಾರಂಭವನ್ನು ಆಟೋಗ್ರಾಫ್ ಪಡ 'ಯಲಿಕ್ಕಾಗಲಿ, ಫೋಟೋಗ್ರಾಫ್ ಪಡೆಯಲಿಕ್ಕಾಗಲಿ ಹಮ್ಮಿಕೊಂಡಿರಲಿಲ್ಲ. ಆಟೋಗ್ರಾಫ್, ಫೋಟೋಗ್ರಾಫ್ ಹುಚ್ಚು ಏನಿದ್ದರೂ ಮೋದಿ ಅವರಿಗಿದೆ ಎಂದು ಕಿಚಾಯಿಸಿದರು.

**ರಾಜೀನಾಮೆಗೆ ಒಂದೇ ಮಾನದಂಡ ಇರಲಿ**

ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ 11 ಮಂದಿ ಸಾವನ್ನಪ್ಪಿದ ಘಟನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ರಾಜೀನಾಮೆ ನೀಡಬೇಕು ಎನ್ನುವುದಾದರೆ, ಇಂತಹ ಪ್ರಕರಣಗಳಲ್ಲಿ ರಾಜೀನಾಮೆ ನೀಡಲು ದೇಶಾದ್ಯಂತ ಒಂದೇ ಮಾನದಂಡ ನಿಗದಿಪಡಿಸಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದರು.

ಬಿಜೆಪಿಯವರು ಕೇಳುತ್ತಿದ್ದಾರೆ ಎಂಬ ಕಾರಣಕ್ಕೆ ನಾವು ರಾಜೀನಾಮೆ ನೀಡಲು ಸಿದ್ಧವಿದ್ದರೂ, ಅದಕ್ಕೂ ಮುಂಚೆ ಎಲ್ಲದಕ್ಕೂ ಒಂದೇ ಮಾನದಂಡ ನಿಗದಿಪಡಿಸಬೇಕು ತಾನೇ ಎಂದು ಪ್ರಶ್ನಿಸಿದರು. ಪೆಹಲ್ಗಾಂನಿಂದ ಹಿಡಿದು ಕುಂಭಮೇಳದವರೆಗೂ ಒಂದೇ ಮಾನದಂಡ ಇರಬೇಕು. ಪೆಹಲ್ಗಾಂನಲ್ಲಿ ಭಯೋತ್ಪಾದಕರು 26 ಜನರನ್ನು ಬಲಿ ತೆಗೆದುಕೊಂಡರು. ಇವತ್ತಿಗೂ ಆ ಭಯೋತ್ಪಾದಕರು ಎಲ್ಲಿದ್ದಾರೆ ಎಂಬುದರ ಕುರಿತು ಸುಳಿವಿಲ್ಲ. ಪೆಹಲ್ಗಾಂ ಘಟನೆಗೆ ಸಂಬಂಧಿಸಿದಂತೆ ಯಾರಾದರೂ ಗೃಹ ಸಚಿವ ಅಮಿತ್ ಶಾ ಅವರ ರಾಜೀನಾಮೆ ಕೇಳಿದ್ದಿದೆಯಾ ಎಂದು ಗರಂ ಆಗಿ ಪ್ರಶ್ನಿಸಿದರು.

ಪ್ರಯಾಗರಾಜ್‌ನಲ್ಲಿ ನಡೆದ ಮಹಾಕುಂಭ ಮೇಳದಲ್ಲಿ ನೂರಾರು ಅಮಾಯಕ ಭಕ್ತರು ಕಾಲ್ತುಳಿತಕ್ಕೆ ಸಿಲುಕಿ ಸಾವನ್ನಪ್ಪಿದರು. ಆಗ ಯಾರೊಬ್ಬರೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ರಾಜೀನಾಮೆ ಕೇಳಿದರಾ? ಅಲ್ಲಿ ಸಾವು ಸಂಭವಿಸಿದರೆ ಅದು ಭಕ್ತರ ತಪ್ಪು. ಇಲ್ಲಿ ಸಾವು ಸಂಭವಿಸಿದರೆ ಅದು ಸರ್ಕಾರದ ತಪ್ಪು ಎಂದು ವ್ಯಾಖ್ಯಾನಿಸುವುದು ಯಾವ ನ್ಯಾಯ ಎಂದು ಸಚಿವ ಪ್ರಿಯಾಂಕ್ ಖರ್ಗೆ ಅಚ್ಚರಿ ವ್ಯಕ್ತಪಡಿಸಿದರು. ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಡಾ.ಕಿರಣ ದೇಶಮುಖ ಉಪಸ್ಥಿತರಿದ್ದರು.

# 2024ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

**ರಾಯಚೂರು,ಜೂ.6–** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪ್ರತಿ ವ಼ರ್ಷದಂತೆ 2024ನೇ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ನಾನಾ ಪ್ರಕಾರಗಳ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಿದೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸಲು ಕೃತಿಗಳು 2024ರ ಜನವರಿ 01 ರಿಂದ 2024ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2024 ಎಂದು ಮುದ್ರಿತವಾಗಿರಬೇಕು.

ಯಾವ ಯಾವ ಪ್ರಕಾರಗಳು: ಕಾವ್ಯ, ನವಕವಿಗಳ ಪ್ರಥಮ ಕವನಸಂಕಲನ, ಕಾವ್ಯ ಹಸ್ತಪ್ರತಿ, ಕಾದಂಬರಿ, ಸಣ್ಣಕತೆ, ನಾಟಕ, ಲಲಿತ ಪ್ರಬಂಧ, ಪ್ರವಾಸ ಸಾಹಿತ್ಯ, ಜೀವನಚರಿತ್ರೆ/ ಆತ್ಮಕಥೆ, ಸಾಹಿತ್ಯ ವಿಮರ್ಶೆ, ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ, ಮಾನವಿಕ, ಗ್ರಂಥ ಸಂಪಾದನೆ, ವೈಚಾರಿಕ / ಅಂಕಣ ಬರಹ, ಅನುವಾದ, ಲೇಖಕರ ಮೊದಲ ಸ್ವತಂತ್ರಕೃತಿ, ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದ, ದಾಸ ಸಾಹಿತ್ಯ, ಸಂಕೀರ್ಣ ಮತ್ತು ಗಜಲ್ ಕಾವ್ಯ ಪ್ರಕಾರಗಳಲ್ಲಿ ಬಹುಮಾನ ನೀಡಲಾಗುತ್ತದೆ.

2024ನೇ ವರ್ಷದ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ ನಾಲ್ಕು ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು–560002 ಇವರಿಗೆ ರಿಜಿಸ್ಟ್ರಾರ್ ಅಂಚೆ / ಕೋರಿಯರ್ ಮೂಲಕ ಅಥವಾ ಖುದ್ದಾಗಿ 2025ರ ಜುಲೈ 15ರೊಳಗೆ ತಲುಪಿಸಬೇಕು. ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ https:// sahithyaacademy.karnataka.gov.in/ ಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆವಿಯ ರಿಜಿಸ್ಟ್ರಾರ್ ಕರಿಯಪ್ಪ ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು:** ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಪುಸ್ತಕ ಬಹುಮಾನ ಪಡೆದವರ ಕೃತಿಗಳು ಹಾಗೂ ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ ಎಂಬುದನ್ನು ಲೇಖಕರು ಗಮನಿಸಬೇಕು ಎಂಬುದಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

# ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ರಾಯಚೂರು,ಜೂ.6–** ನಗರದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಸರ್ಕಾರಿ ಐಟಿಐ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿಯನ್ನು ಹತ್ತಿರದ ಯಾವುದೇ ಸರ್ಕಾರಿ/ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಮೂಲಕ ಸ್ವೀಕೃತಿ ಪಡೆದು, ಅರ್ಜಿಗಳನ್ನು ಮೆರಿಟ್ ಆಧಾರದಲ್ಲಿ ಭರ್ತಿ ಪ್ರವೇಶಾತಿ ಪಡೆಯಬಹುದು. 10ನೇ ಮತ್ತು 8 ನೇ ತರಗತಿಯಲ್ಲಿ ಉತ್ತೀರ್ಣರಾದ ಆಸಕ್ತಿಯುಳ್ಳ ಅಭ್ಯರ್ಥಿಗಳು ಅರ್ಜಿಯನ್ನು ನೇರವಾಗಿ ಆಫ್ಲೈನ್ ಮೂಲಕ ಆಗಸ್ಟ್ 31ರೊಳಗೆ ಸಲ್ಲಿಸಬಹುದು.

ಸಲ್ಲಿಸಬೇಕಾದ ದಾಖಲಾತಿಗಳು: ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಾಧ್ಯಾಪಕ ಸಹಿ ಪಡೆದಿರುವ 10 ನೇ ತತ್ಸಮಾನ / 8ನೇ ತರಗತಿಯಲ್ಲಿ ಉತ್ತೀರ್ಣರಾದ ಅಂಕಪಟ್ಟಿ, ಇತ್ತೀಚಿನ 2 ಭಾವಚಿತ್ರ, ಜಾತಿ ಆದಾಯ ಪ್ರಮಾಣ ಪತ್ರದ ಪ್ರತಿಗಳನ್ನು ಕಡ್ಡಾಯ ಸಲ್ಲಿಸಬೇಕು. 371ಜೆ ಪ್ರಮಾಣ ಪತ್ರ, ಗ್ರಾಮೀಣ ಮತ್ತು ವ್ಯಾಸಂಗ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಸಂಪರ್ಕಿಸಬಹುದಾಗಿದೆ ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಮುಖ್ಯಾಧ್ಯಾಪಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂಮಿಯ ಮೇಲಿರುವ ಜೀವಸಂಕುಲಕ್ಕೆ ಪರಿಸರ ಅವಶ್ಯಕ

**ಕಲಬುರಗಿ,ಜೂ.6–**ಭೂಮಿಯ ಮೇಲಿರುವ ಜೀವ ಸಂಕುಲಕೆ ಪರಿಸರ ಅತ್ಯವಶ್ಯಕವಾಗಿದೆ ಎಂದು ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ವಿಜಯಕುಮಾರ ಡಿ.ಹೇಳಿದರು. ನಗರದ ಕೆಪಿಇ ಶಿಕ್ಷಣ ಸಂಸ್ಥೆಯ ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಆವರಣದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಸಸಿಗಳು ನೆಡುವುದರ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಿ ಅವರು ಮಾತನಾಡಿದರು.

ಮಾನವ ಸೇರಿದಂತೆ ಇತರೆ ಪ್ರಾಣಿ, ಪಕ್ಷಿಗಳು, ಸೇರಿದಂತೆ ಪ್ರತಿಯೊಂದು ಜೀವ ಸಂಕುಲ ಆಹಾರ, ಗಾಳಿ, ನೀರು ಇತರೆ ಅಗತ್ಯತೆಗಳಿಗಾಗಿ ಪರಿಸರವನ್ನ ಅವಲಂಭಿಸಿದೆ ಎಂದರೆ ತಪ್ಪಾಗಲಾರದು. ಇತ್ತಿಚಿನ ದಿನಗಳಲ್ಲಿ ಮಾನವನು ಆಧುನಿಕ ಬದುಕಿನ ಗೀಳಿಗೆ ಬಿದ್ದು ಪರಿಸರವನ್ನು ನಾಶ ಮಾಡುತ್ತಿದ್ದಾನೆ. ಈಗ ಮಾನವನ ಈ ದುರಾಸೆಯಿಂದ ಗಾಳಿ, ನೀರು, ಮಣ್ಣು ಮುಂತಾದ ಪರಿಸರದ ಪ್ರತಿಯೊಂದು ಅಂಶವೂ ಕಲುಷಿತ 'ಗೊಂಡಿದೆ. ಮನುಷ್ಯ ತನ್ನ ಅಭಿವೃದ್ಧಿಗಾಗಿ ತನಗೆ ಅರಿವಿಲ್ಲದಂತೆ ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಪರಿಸರವೇ ನಮ್ಮ ಆರೋಗ್ಯ ಭಾಗ್ಯ ಎಂದು ನಾವೆಲ್ಲರೂ ಒಂದೊಂದು ಸಸಿ ನೆಡುವುದರ ಮೂಲಕ ಪರಿಸರವನ್ನು ಸಂರಕ್ಷಿಸಬೇಕೆಂದರು.

ಇದೇ ಸಂದರ್ಭದಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ಸಿದ್ದಪ್ಪ ಎಂ ಕಾಂತಾ, ಡಾ. ಗಾಂಧೀಜಿ ಮೋಳಕೆರೆ, ಡಾ. ಸಿದ್ದಾರ್ಥ್ ಮದನ್ಕರ್,



ಡಾ. ಹರ್ಷವರ್ಧನ್ ಬಿ, ಡಾ.ದತ್ತುರಾಯ, ಡಾ.ಕರಬಸಪ್ಪ ಮತ್ತು ಶೃತಿ ಭಾಗವಹಿಸಿದ್ದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**